VOLUME: 16 | 08 JUNE 2026 | ಸೋಮವಾರ | RS: 2 | PAGE: 06 ISSUE: 118 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಕಾಂತರ ಸಿನಿಮಾ ನಟಿ ರುಕ್ಮಿಣಿ ವಸಂತ್ ಬಿಕಿನಿ ಫೋಟೋ ವೈರಲ್ ಪ್ರಕರಣದ ತನಿಖೆಯನ್ನ ಸೈಬರ್ ಕ್ರೈಂ ಪೊಲೀಸರು ಚುರುಕುಗೊಳಿಸಿದ್ದಾರೆ. ಎಐ ತಂತ್ರಜ್ಞಾನ ಬಳಸಿ ಕೆಲ ಕಿಡಿಗೇಡಿಗಳು ಸಾಮಾಜಿಕ ಜಾಲತಾಣಗಳಲ್ಲಿ ನಟಿ ರುಕ್ಮಿಣಿ ವಸಂತ್ ಅವರ ಫೋಟೋಗಳನ್ನ ಎಡಿಟ್ ಮಾಡಿ ವಿವಿಧ ಅಕೌಂಟ್‌ಗಳಿಂದ ವೈರಲ್ ಮಾಡಲಾಗುತ್ತಿತ್ತು.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ರೌಡಿ ನಿಗ್ರಹ ದಳ ಸ್ಥಾಪನೆ

ಬೆಂಗಳೂರು: ಹೊಸದಾಗಿ ರೌಡಿ ನಿಗ್ರಹ ಪಡೆ ರಚನೆ ಮಾಡಿ ಡಿಜಿ–ಐಜಿಪಿ ಡಾ. ಎಂ.ಎ.ಸಲೀಂ ಆದೇಶ ಹೊರಡಿಸಿದ್ದಾರೆ. ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆಯಾ ಸರ್ಕಲ್ ಇನ್ಸ್‌ಪೆಕ್ಟರ್‌ಗಳ ಉಸ್ತುವಾರಿಯಲ್ಲಿ ರೌಡಿ ನಿಗ್ರಹ ಪಡೆಗಳ ರಚನೆ ಮಾಡಿ ಆದೇಶಿಸಿದ್ದಾರೆ.

ನೂತನ ಸಿಎಂ ಡಿ.ಕೆ.ಶಿವಕುಮಾರ್ ಮೊದಲ ಪತ್ರಿಕಾಗೋಷ್ಠಿಯಲ್ಲಿ ರೌಡಿಗಳನ್ನ ಹಾಗೂ ರೌಡಿ ಚಟುವಟಿಕೆಯನ್ನ ಮಟ್ಟ ಹಾಕಲು ರೌಡಿ ನಿಗ್ರಹ ದಳವನ್ನ ರಚನೆ ಮಾಡುವುದಾಗಿ ಘೋಷಣೆ ಮಾಡಿದ್ದರು. ಸಿಎಂ ಡಿ.ಕೆ.ಶಿವಕುಮಾರ್ ಸೂಚನೆಯ ಮೇರೆಗೆ ರೌಡಿ ನಿಗ್ರಹ ಪಡೆಯನ್ನ ರಚಿಸಿ ಆದೇಶಿಸಲಾಗಿದೆ.

ಕ್ರಿಮಿನಲ್ ಒಬ್ಬ ಪದೇ ಪದೇ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವ ವಿಚಾರ ತಿಳಿದು ಕ್ರಿಮಿನಲ್‌ಗಳ ವಿರುದ್ಧ ಕ್ರಮಕೈಗೊಳ್ಳುವಲ್ಲಿ ಅಧಿಕಾರಿಗಳು ವಿಫಲವಾದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಾಗಿ ತಿಳಿಸಲಾಗಿದೆ.

## ಜಿಡಿಪಿ ಹೆಚ್ಚಳ: ಪಿಎಂ ಉನ್ನತ ಮಟ್ಟದ ಸಭೆ

ನವದೆಹಲಿ: ಜಾಗತಿಕ ಸವಾಲುಗಳು ಮತ್ತು ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾಗಿರುವ ಭೌಗೋಳಿಕ ರಾಜಕೀಯ ಅನಿಶ್ಚಿತತೆಗಳ ನಡುವೆಯೇ, ಭಾರತದ ಆರ್ಥಿಕ ಬೆಳವಣಿಗೆಯನ್ನು ಮತ್ತಷ್ಟು ಬಲಪಡಿಸುವ ಕ್ರಮಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ ಆರ್ಥಿಕ ಸಲಹಾ ಮಂಡಳಿಯ ಉನ್ನತ ಮಟ್ಟದ ಸಭೆ ನಡೆಸಿದರು.

ವಿಶ್ವದ ಪ್ರಮುಖ ಆರ್ಥಿಕ ರಾಷ್ಟ್ರಗಳು ರಾಜಕೀಯ ಉದ್ವಿಗ್ನತೆ, ವ್ಯಾಪಾರ ಅನಿಶ್ಚಿತತೆ ಮತ್ತು ಬೆಳವಣಿಗೆ ಕುಂಠಿತವನ್ನು ಎದುರಿಸುತ್ತಿರುವ ಸಮಯದಲ್ಲಿ ಭಾರತದ ಪ್ರಗತಿಯ ವೇಗವನ್ನು ಹೇಗೆ ಕಾಯ್ದುಕೊಳ್ಳಬೇಕು ಎಂಬುದರ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು ಎಂದು ಅಧಿಕೃತ ಮೂಲಗಳು ತಿಳಿಸಿವೆ. ಜೊತೆಗೆ, ದೇಶದ ಜನರ ಜೀವನ ಸುಲಭವಾಗಿರಲು ಮತ್ತು ಉದ್ಯಮ ಸ್ನೇಹಿ ವಾತಾವರಣವನ್ನು ಸುಧಾರಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಸುಧಾರಣೆಗಳ ಬಗ್ಗೆಯೂ ಸಭೆಯಲ್ಲಿ ಪರಾಮರ್ಶಿಸಲಾಯಿತು ಎಂದು ತಿಳಿದುಬಂದಿದೆ.

ಇದೇ ವೇಳೆ, ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷವು ಭಾರತ ಮತ್ತು ಜಾಗತಿಕ ಆರ್ಥಿಕತೆಯ ಮೇಲೆ ಬೀರುವ ಪರಿಣಾಮಗಳ ಕುರಿತು ಆರ್ಥಿಕ ಸಲಹಾ ಮಂಡಳಿಯ ಸದಸ್ಯರು ತಮ್ಮ ಅಂದಾಜುಗಳನ್ನು ಪ್ರಧಾನಿ ಮೋದಿ ಅವರ ಜೊತೆ ಹಂಚಿಕೊಂಡರು.

ನಿರೀಕ್ಷೆಗೂ ಮೀರಿದ ಆರ್ಥಿಕ ಪ್ರಗತಿ: 2025–26ನೇ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ಭಾರತದ ಆರ್ಥಿಕತೆಯು ನಿರೀಕ್ಷೆಗಿಂತ ವೇಗವಾಗಿ ಬೆಳೆದಿದೆ ಎಂಬ ಅಧಿಕೃತ ಅಂಕಿ–ಅಂಶಗಳು ಹೊರಬಿದ್ದ ಮರುದಿನವೇ ಈ ಮಹತ್ವದ ಸಭೆ ನಡೆದಿದೆ. ಜೂನ್ 5 ರಂದು ಬಿಡುಗಡೆಯಾದ ಸರ್ಕಾರಿ ದತ್ತಾಂಶದ ಪ್ರಕಾರ, ಜನವರಿ–ಮಾರ್ಚ್ ತ್ರೈಮಾಸಿಕದಲ್ಲಿ ಭಾರತದ ನೈಜ ಒಟ್ಟು ದೇಶೀಯ ಉತ್ಪನ್ನ (ಜಿಡಿಪಿ) ಶೇಕಡಾ 7.8 ರಷ್ಟು ಬೆಳವಣಿಗೆ ಕಂಡಿದೆ. ಇದರೊಂದಿಗೆ, ಇಡೀ ಆರ್ಥಿಕ ವರ್ಷದ ಜಿಡಿಪಿ ಪ್ರಗತಿ ದರವು ಶೇಕಡಾ 7.7 ಕ್ಕೆ ತಲುಪಿದೆ.

## ಧರ್ಮಸ್ಥಳ ಕೇಸ್‌ಗೆ ಪ್ರಣಬ್ ಮೊಹಂತಿ ನೇಮಕ

ಬೆಂಗಳೂರು: ಹೊಸದಾಗಿ ರಚನೆಯಾದ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರವು ತನ್ನ ಮೊದಲ ಪ್ರಮುಖ ವರ್ಗಾವಣೆಯಲ್ಲಿ, ಹಿರಿಯ ಐಪಿಎಸ್ ಅಧಿಕಾರಿ ಪ್ರಣಬ್ ಮೊಹಂತಿ ಅವರನ್ನು ಕರ್ನಾಟಕ ಅಪರಾಧ ತನಿಖಾ ಇಲಾಖೆಯ (ಸಿಐಡಿ) ಮುಖ್ಯಸ್ಥರನ್ನಾಗಿ ನೇಮಿಸಿದೆ. ಸರ್ಕಾರ ಭಾನುವಾರ ಅಧಿಸೂಚನೆ ಹೊರಡಿಸಿದ್ದು, ಮೊಹಂತಿ ಅವರನ್ನು ಆಂತರಿಕ ಭದ್ರತಾ ವಿಭಾಗದ ಪ್ರಸ್ತುತ ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಹುದ್ದೆಯಿಂದ ಬೆಂಗಳೂರಿನ ಸಿಐಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳ ಡಿಜಿಪಿಗೆ ವರ್ಗಾಯಿಸಿದೆ.

ಮೊಹಂತಿ ಅವರನ್ನು ಬೆಂಗಳೂರಿನ ಅಪರಾಧ ತನಿಖಾ ಇಲಾಖೆಯ ಮಹಾನಿರ್ದೇಶಕ (ಸೈಬರ್ ಅಪರಾಧಗಳು) ಹುದ್ದೆಯ ಏಕಕಾಲಿಕ ಉಸ್ತುವಾರಿ ಸಹ ನೀಡಲಾಗಿದೆ. ಮುಖ್ಯವಾಗಿ, ಮೊಹಂತಿ ಅವರು ರಾಜ್ಯಾದ್ಯಂತ ಸೈಬರ್ ಅಪರಾಧಗಳನ್ನು ನಿಭಾಯಿಸಲು ಮತ್ತು ತನಿಖೆ ಮಾಡಲು ಸ್ಥಾಪಿಸಲಾದ ಸೈಬರ್ ಕಮಾಂಡ್ ಘಟಕದ (ಸಿಸಿಯು) ಮುಖ್ಯಸ್ಥರಾಗಿ ಮುಂದುವರಿಯುತ್ತಾರೆ.



# ಮೆಟ್ರೋ ಹತ್ತಿದ ಕನಕಪುರದ ಬಂಡೆ..!

**ಬೆಂಗಳೂರು:** ಹಾರೋಹಳ್ಳಿ, ಕನಕಪುರ ಕೃತಜ್ಞತೆ ಸಮರ್ಪಣಾ ಪ್ರವಾಸಕ್ಕಾಗಿ ತೆರಳಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ವಿಧಾನಸೌಧ ಬಳಿಯ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರೋ ನಿಲ್ದಾಣದಿಂದ ಕನಕಪುರ ರಸ್ತೆಯ ಕೊನೆ ನಿಲ್ದಾಣ ಸಿಲ್ಕ್ ಇನ್ಸ್ಟಿಟ್ಯೂಟ್‌ವರೆಗೆ ಮೆಟ್ರೋ ರೈಲಿನಲ್ಲಿ ಪ್ರಯಾಣ ಬೆಳೆಸಿದರು.

ರಸ್ತೆ ಮಾರ್ಗದ ಮೂಲಕ ಹೋಗುವ ವೇಳೆ ಜೀರೋ ಟ್ರಾಫಿಕ್‌ನಿಂದ ಸಾರ್ವಜನಿಕರ ವಾಹನ ಸಂಚಾರಕ್ಕೆ ತೊಂದರೆಯಾಗುವುದನ್ನು ಮನಗಂಡು ಸಿಎಂ ಡಿ.ಕೆ.ಶಿವಕುಮಾರ್ ಮೆಟ್ರೋದಲ್ಲಿ ಪ್ರಯಾಣಿಸಿದರು. ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿ ಮತ್ತು ಕನಕಪುರ ತಾಲೂಕಿನ ನಾನಾ ಕಡೆ ಜನರಿಗೆ ಕೃತಜ್ಞತೆ ಸಲ್ಲಿಸಲು ಇಂದು ಬೆಳಗ್ಗೆ 10 ಗಂಟೆಯಿಂದ ರಾತ್ರಿ 9ರವರೆಗೆ ಕೃತಜ್ಞತೆ ಸಮರ್ಪಣಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಯುವಕ–ಯುವತಿಯರ ಜೊತೆ ಸೆಲ್ಫಿ, ಸಾರ್ವಜನಿಕರ ಜೊತೆ ಮಾತುಕತೆ: ಮೆಟ್ರೋ ಪ್ರಯಾಣದ ವೇಳೆ ಡಿ.ಕೆ.ಶಿವಕುಮಾರ್, ಸಹ ಪ್ರಯಾಣಿಕರೊಂದಿಗೆ ಕುಶಲೋಪರಿ, ಚಿಕ್ಕ ಮಗುವಿಗೆ ಚಾಕೊಲೇಟ್ ಕೊಟ್ಟರಲ್ಲದೆ, ಯುವಕ–ಯುವತಿಯರೊಂದಿಗೆ ಸೆಲ್ಫಿ ತೆಗೆಸಿಕೊಂಡರು. ಮುಖ್ಯಮಂತ್ರಿಯಾದ ನಂತರ ಮೊದಲ ಬಾರಿಗೆ ಅವರು ತವರು ಕ್ಷೇತ್ರದ ಜನರನ್ನು ಭೇಟಿ ಮಾಡುತ್ತಿದ್ದಾರೆ.

ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರೋ ನಿಲ್ದಾಣದಲ್ಲಿ ಕೆಲಹೊತ್ತು ದಿನ ಪತ್ರಿಕೆಗಳ ಮೇಲೆ ಕಣ್ಣಾಡಿಸಿದ ಸಿಎಂ, ನಂತರ ಮೆಟ್ರೋ ಪ್ರಯಾಣಿಕರಿಗೆ ಹಸ್ತಲಾಘವ ಮಾಡಿದರು. ಯುವಕ–ಯುವತಿಯರು ಹುಮ್ಮಸ್ಸಿನಿಂದ ಮಾತನಾಡಿಸಿ ಹಸ್ತಲಾಘವ ಮಾಡಿದರು. ಅನೇಕರು ಮುಖ್ಯಮಂತ್ರಿಗಳ ಜೊತೆ ಸೆಲ್ಫಿ ತೆಗೆದುಕೊಂಡು ಸಂಭ್ರಮಿಸಿದರು.

ಮೆಟ್ರೋ ಪ್ರಯಾಣ ಹೇಗನಿಸುತ್ತದೆ ಎಂದು ಸಿಎಂ ಯುವತಿಯೊಬ್ಬರನ್ನು ಕೇಳಿದಾಗ, 'ಮೆಟ್ರೋ ರೈಲು ಪ್ರಯಾಣದಿಂದ ಸಾಕಷ್ಟು ಸಮಯ ಉಳಿಯುತ್ತಿದೆ' ಎಂದು ಉತ್ತರಿಸಿದರು. ಇದೇ ವೇಳೆ ಮಗುವಿಗೆ ಚಾಕೊಲೇಟ್ ನೀಡಿ ಅವರ ಪೋಷಕರ ಜೊತೆ ಸೆಲ್ಫಿ ತೆಗೆದುಕೊಂಡರು. ಮಗುವೊಂದು ನನಗೂ ಫೋಟೋ ಕೊಡಿ ಎಂದಾಗ ಸ್ವತಃ ಮುಖ್ಯಮಂತ್ರಿಗಳೇ ಮೊಬೈಲ್ ಪಡೆದುಕೊಂಡು ಸೆಲ್ಫಿ ಕೊಟ್ಟರು.



ವಿದೇಶಿ ಪ್ರವಾಸಿಗರ ಬಳಿ ಮೆಟ್ರೋ ಪ್ರಯಾಣದ ಅನುಭವ ಹೇಗಿದೆ ಎಂದು ಕೇಳಿ ತಿಳಿದುಕೊಂಡರು. ಯುವತಿಯೋರ್ವರಿಗೆ 'ಏನು ಓದುತ್ತಿದ್ದೀರಿ? ಎಲ್ಲಿ? ಎಲ್ಲಿ ವಾಸ ಮಾಡುತ್ತಿದ್ದೀರಿ?' ಎಂದು ಮಾಹಿತಿ ಪಡೆದು, 'ಚೆನ್ನಾಗಿ ಓದಬೇಕು. ಭಾರತವನ್ನು ಕರ್ನಾಟಕದ ಮೂಲಕ ನೋಡಲಾಗುತ್ತಿದೆ. ಸಿಕ್ಕ ಅವಕಾಶಗಳನ್ನು ಬಳಸಿಕೊಳ್ಳಬೇಕು' ಎಂದು ಕಿವಿಮಾತು ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್ ನಿಲ್ದಾಣದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಸಿಎಂ, 'ನನ್ನ ಕ್ಷೇತ್ರದ ಜನ ದೊಡ್ಡಆಲಹಳ್ಳಿಯಿಂದ ನನ್ನನ್ನು ಇಲ್ಲಿಯವರೆಗೆ ಕರೆತಂದಿದ್ದಾರೆ. ಅವರು ನನ್ನನ್ನು ಭೇಟಿಯಾಗಬೇಕು ಎಂದು ಕೇಳುತ್ತಿದ್ದರು. ಅದಕ್ಕೆ ನನ್ನ ಕ್ಷೇತ್ರ, ನನ್ನ ಜನತೆಯನ್ನು ಭೇಟಿಯಾಗುತ್ತಿದ್ದೇನೆ' ಎಂದು ತಿಳಿಸಿದರು. 'ನನ್ನ ಕ್ಷೇತ್ರದ ಜನತೆಯ ಸಮಸ್ಯೆ, ಕುಂದುಕೊರತೆಗಳನ್ನು ಆಲಿಸಲು ಪ್ರತ್ಯೇಕ ಅಧಿಕಾರಿಗಳನ್ನು ನೇಮಕ ಮಾಡುತ್ತೇನೆ. ಕ್ಷೇತ್ರದ ಜನತೆ ಎಂದೂ ತೊಂದರೆ ಕೊಟ್ಟವರಲ್ಲ. ಅವರವರ ಕೆಲಸ ನೋಡಿಕೊಂಡು ಹೋಗುತ್ತಿದ್ದಾರೆ. ಅವರಿಗೆ ರಾಜಕೀಯ ತಿಳಿವಳಿಕೆ, ಪ್ರಜ್ಞೆಯಿದೆ. ನನ್ನಿಂದ ಅಪೇಕ್ಷೆ ಮಾಡದೇ ಹೋದರೂ ಅವರ ಸೇವೆ ಮಾಡಬೇಕಿರುವುದು ನನ್ನ ಕರ್ತವ್ಯ' ಎಂದರು.

'ನನ್ನ ಜನರಿಗೆ ಕೃತಜ್ಞತೆ ಸಲ್ಲಿಸಬೇಕು. ಅವರ ಭಾವನೆ, ಶ್ರಮಕ್ಕೆ ತಕ್ಕ ಫಲ ಸಿಗಬೇಕು. ಸಾತನೂರು ಕ್ಷೇತ್ರ, ದೊಡ್ಡಆಲಹಳ್ಳಿ ಜಿಲ್ಲಾ ಪಂಚಾಯಿತಿ, ಕನಕಪುರದ ಜನ ನನ್ನ ಭೇಟಿ ಮಾಡಬೇಕು ಎಂದು ಹೇಳುತ್ತಿದ್ದರು. ಅವರಿಗೆ ಸಮಯ ನೀಡುವುದಕ್ಕೆ ಆಗಿರಲಿಲ್ಲ. ಯಾರೂ ಬೆಂಗಳೂರಿಗೆ ಬರಬೇಡಿ ಅಂತ ಮನವಿ ಮಾಡಿದ್ದೆ. ಆದ ಕಾರಣಕ್ಕೆ ಕ್ಷೇತ್ರಕ್ಕೆ ಭೇಟಿ ನೀಡುತ್ತಿದ್ದೇನೆ. ಕ್ಷೇತ್ರದ ಜನ ವಿಧಾನಸೌಧದ ಮೆಟ್ಟಿಲು ಹತ್ತಿಸಿದ್ದಾರೆ. ಕಳೆದ 40 ವರ್ಷಗಳಿಂದ ಬೆಳೆಸಿದ್ದಾರೆ. ಮೊದಲು ಅವರಿಗೆ ಕೃತಜ್ಞತೆ ಸಲ್ಲಿಸಬೇಕಾಗಿರುವುದು ನನ್ನ ಕರ್ತವ್ಯ' ಎಂದು ಹೇಳಿದರು.

ಚಾಮುಂಡೇಶ್ವರಿಗೆ ಪೂಜೆ: ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿಯಲ್ಲಿ ಇಂದು ಕೃತಜ್ಞತೆ ಸಮರ್ಪಣಾ ಪ್ರವಾಸ ಸಂದರ್ಭದಲ್ಲಿ ಸಿಎಂ ತಮ್ಮ ಸ್ವಕ್ಷೇತ್ರ ಕನಕಪುರಕ್ಕೆ ಭೇಟಿ ನೀಡಿದರು. ಈ ವೇಳೆ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದರು.

ನಂತರ ಕನಕಪುರದ ಬೇಕುಪ್ಪೆಯಲ್ಲಿ ತಮ್ಮ ಮನೆದೇವರು ಕೆಂಕೇರಮ್ಮ ದೇವಿಗೆ ಪೂಜೆ ಸಲ್ಲಿಸಿದರು. ಈ ವೇಳೆ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಹಾಗೂ ಸಾವಿರಾರು ಕಾರ್ಯಕರ್ತರು ಇದ್ದರು.

**ಇನ್ನು ಒಕ್ಕಲಿಗ ಸಮುದಾಯಕ್ಕೆ ಹೆಚ್ಚಿನ ಸಚಿವ ಸ್ಥಾನ ನೀಡಬೇಕೆಂದು ಬೇಡಿಕೆ ಹೆಚ್ಚಿದೆ. ಮಾಗಡಿ ಬಾಲಕೃಷ್ಣ, ಚೆಲುವರಾಯಸ್ವಾಮಿ ಶರತ್ ಬಚ್ಚೇಗೌಡ ಸೇರಿ ಒಕ್ಕಲಿಗ ಶಾಸಕರ ಪರ ನಂಜಾವಧೂತ ಶ್ರೀಗಳು ಬ್ಯಾಟಿಂಗ್ ಮಾಡಿದ್ದಾರೆ. ಬಾಲಕೃಷ್ಣ, ಚೆಲುವರಾಯಸ್ವಾಮಿ ಯಾರ ಜೊತೆ ಇರ್ತಾರೋ ಅವರು ಮುಖ್ಯಮಂತ್ರಿ ಆಗುತ್ತಾರೆ. ಬೇರೆಯವರನ್ನೆಲ್ಲ ಮುಖ್ಯಮಂತ್ರಿ ಮಾಡಿ ಈಗ ತಾವೇ ಸಚಿವರಾಗಲು ಒದ್ದಾಡುತ್ತಿದ್ದಾರೆ ಎಂದು ನಂಜಾವಧೂತ ಶ್ರೀ ಹೇಳಿದ್ದಾರೆ.**

# ಸಚಿವ ಸ್ಥಾನಕ್ಕೆ ಹೆಚ್ಚಿದ ಲಾಬಿ

**ಬೆಂಗಳೂರು:** ಸಿಎಂ ಡಿಕೆ ಶಿವಕುಮಾರ್ ಸರ್ಕಾರದ ಎರಡನೇ ಹಂತದ ಕ್ಯಾಬಿನೆಟ್ ರಚನೆಗೆ ಸಿದ್ಧತೆಗಳು ಶುರುವಾಗಿದೆ. 20 ಸಚಿವ ಸ್ಥಾನಗಳು ಬಾಕಿ ಇದ್ದು, 40 ಆಕಾಂಕ್ಷಿಗಳು ಲಾಬಿ ಮಾಡುತ್ತಿದ್ದಾರೆ.

ಮೊದಲ ಹಂತದಲ್ಲಿ ಹಿರಿತನ, ಜಾತಿ ಲೆಕ್ಕಾಚಾರದಲ್ಲಿ ಬ್ಯಾಲೆನ್ಸ್ ಸಂಪುಟ ಮಾಡಿದ್ದ ಹೈಕಮಾಂಡ್ ಎರಡನೇ ಹಂತದಲ್ಲಿ ಏನು ಮಾಡುತ್ತೆ ಎಂಬ ಕುತೂಹಲ ದಟ್ಟವಾಗಿದೆ. ಅಲ್ಲದೆ, ಮೊದಲ ಪಟ್ಟಿಯಲ್ಲಿ ಸಿದ್ದರಾಮಯ್ಯ ಮೇಲುಗೈ ಸಾಧಿಸಿದ್ದು, ಎರಡನೇ ಪಟ್ಟಿಯಲ್ಲಿ ಡಿಕೆಶಿ ಪಟ್ಟಿ ಮೇಲುಗೈ ಸಾಧಿಸುತ್ತಾರಾ? ಎಂಬ ಚರ್ಚೆ ಜೋರಾಗಿದೆ.

ಡಿಕೆ ಸಂಪುಟದಲ್ಲಿ 20 ಸಚಿವ ಸ್ಥಾನಗಳು ಬಾಕಿ ಇದ್ದು, ಯಾರಿಗೆ ಅದೃಷ್ಟ ಒಲಿಯುತ್ತೆ ಎಂಬ ಲೆಕ್ಕಾಚಾರ ಜೋರಾಗಿದೆ. ಸಿದ್ದರಾಮಯ್ಯ, ಸಿಎಂ ಡಿಕೆ ಶಿವಕುಮಾರ್ ಸಂಪುಟಕ್ಕೆ ಸೇರಲು ಸರ್ಕಸ್ ಮಾಡುತ್ತಿದ್ದಾರೆ. ಕಾಂಗ್ರೆಸ್ ವಲಯದಲ್ಲಿ ಎರಡನೇ ಪಟ್ಟಿ ರಾಹುಲ್ ಗಾಂಧಿ ಆಯ್ಕೆಯೇ ಅಂತಿಮ ಅಂತಲೂ ಚರ್ಚೆ ಆಗುತ್ತಿದೆ.

ಶ್ರೀರಂಗ ಪಟ್ಟಣ ಶಾಸಕ ರಮೇಶ್ ಬಂಡಿಸಿದ್ದೇಗೌಡ ನಮಗೂ ಸಚಿವ ಸ್ಥಾನ ಕೊಡಿ ಎಂದು ಒತ್ತಾಯಿಸಿದ್ದಾರೆ. ಜಾತಿ ವ್ಯವಸ್ಥೆ ಬಿಟ್ಟು, ಅನುಭವ ಆಧರಿಸಿ ಸಚಿವ ಸ್ಥಾನ ನೀಡಬೇಕು. ನನಗೆ ಸಚಿವನಾಗುವ ಎಲ್ಲಾ ಅರ್ಹತೆಗಳು ಇದೆ, ನಾನು ಫಿಟ್ ಇದೀನಿ ಎಂದಿದ್ದಾರೆ.

ಇನ್ನು ಒಕ್ಕಲಿಗ ಸಮುದಾಯಕ್ಕೆ ಹೆಚ್ಚಿನ ಸಚಿವ ಸ್ಥಾನ ನೀಡಬೇಕೆಂದು ಬೇಡಿಕೆ ಹೆಚ್ಚಿದೆ. ಮಾಗಡಿ ಬಾಲಕೃಷ್ಣ, ಚೆಲುವರಾಯಸ್ವಾಮಿ ಶರತ್ ಬಚ್ಚೇಗೌಡ ಸೇರಿ ಒಕ್ಕಲಿಗ ಶಾಸಕರ ಪರ ನಂಜಾವಧೂತ ಶ್ರೀಗಳು ಬ್ಯಾಟಿಂಗ್ ಮಾಡಿದ್ದಾರೆ. ಬಾಲಕೃಷ್ಣ, ಚೆಲುವರಾಯಸ್ವಾಮಿ ಯಾರ ಜೊತೆ ಇರ್ತಾರೋ ಅವರು ಮುಖ್ಯಮಂತ್ರಿ ಆಗುತ್ತಾರೆ. ಬೇರೆಯವರನ್ನೆಲ್ಲ ಮುಖ್ಯಮಂತ್ರಿ ಮಾಡಿ ಈಗ ತಾವೇ ಸಚಿವರಾಗಲು ಒದ್ದಾಡುತ್ತಿದ್ದಾರೆ ಎಂದು ನಂಜಾವಧೂತ ಶ್ರೀ ಹೇಳಿದ್ದಾರೆ. ಒಕ್ಕಲಿಗ ಸಮುದಾಯಕ್ಕೆ ಇನ್ನೂ ಕನಿಷ್ಟ 4–5 ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಸಿಎಂ ಡಿಕೆ ಶಿವಕುಮಾರ್ ಆಪ್ತೇಷ್ಠ, ಕುಣಿಗಲ್ ಶಾಸಕ ರಂಗನಾಥ್, ಜಮೀರ್ ಅಹಮ್ಮದ್ ಪರ ಬ್ಯಾಟಿಂಗ್ ಮಾಡಿದ್ದಾರೆ. ಜಮೀರ್ ರನ್ನು ಸಂಪುಟದ ಸಚಿವನಾಗಿ ನೋಡ್ಲಿಕ್ಕೆ ಆಸೆ ಪಡುತ್ತೇನೆ ಎಂದಿದ್ದಾರೆ. ವರಿಷ್ಠರು ನಿರ್ಧಾರ ಕೈಗೊಳ್ಳುತ್ತಾರೆ ಎಂದಿದ್ದಾರೆ.

ಇನ್ನು ಕೆ.ಎನ್.ರಾಜಣ್ಣ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ರಂಗನಾಥ್, ಹಗುರವಾಗಿ ಮಾತನಾಡುವವರ ವಿರುದ್ಧ ಪಕ್ಷ ಕಠಿಣ ಕ್ರಮ ತೆಗೆದುಕೊಂಡಿದೆ. ಹಾದಿ ಬೀದಿಯಲ್ಲಿ ಎಲ್ಲಾ ಮಾತಾಡುವಂತಹ ವ್ಯಕ್ತಿತ್ವದವರು ಶಾಸಕರು ಆಗಬಾರದು. ನಮ್ಮ ಜವಾಬ್ದಾರಿಯನ್ನ ಮೀರಿ ಹೇಳಿಕೆಗಳು ಕೊಡುವಂತದ್ದು ಸರಿಯಲ್ಲ.

## 'ಎಲ್ಲಾ ಸಮಸ್ಯೆ ಬಗೆಹರಿಸಲಾಗಿದೆ'

ಬೆಂಗಳೂರು: "ರಾಮಲಿಂಗಾರೆಡ್ಡಿ ಅವರು ನನ್ನ ಸ್ನೇಹಿತರು, ಅವರೊಂದಿಗೆ ಮಾತನಾಡಿದ್ದು, ಎಲ್ಲಾ ಸಮಸ್ಯೆ ಬಗೆಹರಿಸಲಾಗಿದೆ. ಯಾವುದೇ ಕಾರಣಕ್ಕೂ ಅವರ ರಾಜಿನಾಮೆ ಅಂಗೀಕರಿಸುವುದಿಲ್ಲ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಮಾಜಿ ಸಿಎಂ ದೇವರಾಜ ಅರಸು ಅವರ ಪುಣ್ಯಸ್ಮರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಶನಿವಾರ ಪ್ರತಿಕ್ರಿಯೆ ನೀಡಿದರು.

ಶುಕ್ರವಾರ ರಾತ್ರಿ ರಾಮಲಿಂಗಾರೆಡ್ಡಿ ಅವರನ್ನು ಭೇಟಿ ಮಾಡಿದ ವಿಚಾರವಾಗಿ ಕೇಳಿದಾಗ, "ಅನಗತ್ಯವಾಗಿ ತಲೆಕೆಡಿಸಿಕೊಂಡು ಏನೇನೋ ಸ್ಟೋರಿ ಮಾಡಬೇಡಿ. ಅವರು ರಾಜಿನಾಮೆಯನ್ನು ವಾಟ್ಸಪ್ ನಲ್ಲಿ ಕಳಿಸಿಕೊಟ್ಟಿದ್ದು ನಿಜ. ಈಗ ಆ ವಿಚಾರ ಬಗೆಹರಿಸಲಾಗಿದೆ" ಎಂದು ತಿಳಿಸಿದರು.

ನಾವು ಎಲ್ಲಾ ಐವರು ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಮಾಡಿದ್ದೇವೆ. ರಾಜ್ಯ ಸಭೆ ಚುನಾವಣೆಗೆ 3 ಹಾಗೂ ವಿಧಾನ ಪರಿಷತ್ ಚುನಾವಣೆಗೆ 5 ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸಲಾಗಿದೆ. ನಿನ್ನೆ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ನಾಮಪತ್ರ ಸಲ್ಲಿಸಿದ್ದರು. ಕಾಂಗ್ರೆಸ್ ರಾಷ್ಟ್ರೀಯ ವಕ್ತಾರರಾದ ಪವನ್ ಖೇರಾ ಅವರನ್ನು ನಮ್ಮ ಕಾರ್ಯದರ್ಶಿ, ಯುವ ಮುಖಂಡ ಮನ್ಸೂರ್ ಅಲಿ ಖಾನ್ ಅವರಿಗೂ ಅವಕಾಶ ನೀಡಿದ್ದೇವೆ. ಕೆಪಿಸಿಸಿ ಅಧ್ಯಕ್ಷರೂ ಸೇರಿದಂತೆ ವಿಧಾನ ಪರಿಷತ್ ಚುನಾವಣೆಯ ಎಲ್ಲ ಐದು ಸ್ಥಾನಗಳಿಗೂ ಕಾಂಗ್ರೆಸ್ ಕಾರ್ಯಕರ್ತರಿಗೇ ಅವಕಾಶ ನೀಡಲಾಗಿದೆ" ಎಂದರು.

ಸಿದ್ದರಾಮಯ್ಯ ಅವರ ಸರಕಾರದ ವಿರುದ್ಧ ಜನರ ಆಕ್ರೋಶದ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ಸಿಎಂ ಬದಲಾವಣೆಯಾಗಿದೆ ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಪ್ರಧಾನಿ ನರೇಂದ್ರ ಮೋದಿ ಅವರು ನನಗೆ ಶುಭ ಕೋರಿದ್ದಾರೆ. ಅವರಿಗೆ ನಾನು ಧನ್ಯವಾದ ಅರ್ಪಿಸುತ್ತೇನೆ. ನಾನು ಗೌರವಯುತವಾಗಿ ಹೋಗಿ ಅವರನ್ನು ಭೇಟಿ ಮಾಡುವೆ. ಅವರು ರಾಜಕಾರಣ ಮಾಡುವುದು ಬೇಡ, ನಾವು ರಾಜಕಾರಣ ಮಾಡುವುದು ಬೇಡ. ರಾಜ್ಯದ ಜನತೆಯ ಹಿತಕ್ಕಾಗಿ ನಾವು ಎಲ್ಲರೂ ಸೇರಿ ಏನು ಕೆಲಸ ಮಾಡಬೇಕೋ ಅದನ್ನು ಮಾಡೋಣ" ಎಂದು ತಿಳಿಸಿದರು.

## ಇರಾನ್‌ಮೇಲೆ ಮತ್ತೆ ಅಮೆರಿಕಾ ದಾಳಿ

**ಟೆಹ್ರಾನ್/ವಾಷಿಂಗ್ಟನ್:** ಶಾಂತಿ ಮಾತುಕತೆಗಳ ಪ್ರಯತ್ನದ ಹೊರತಾಗಿಯೂ ಅಮೆರಿಕ, ಇರಾನ್ ಮೇಲೆ ದಾಳಿ ನಡೆಸುತ್ತಲೇ ಇದೆ. ಕಳೆದ 1 ವಾರದಲ್ಲಿ 3–4 ಭಾರೀ ಅಮೆರಿಕ ಸೇನೆ ದಾಳಿ ನಡೆಸಿದ್ದು, ಇರಾನಿನ ಡ್ರೋನ್‌ಗಳು ಹಾಗೂ ಅನೇಕ ರ್‍ಯಾಡರ್ ಕೇಂದ್ರಗಳನ್ನ ಧ್ವಂಸಗೊಳಿಸಿದೆ.

ಹಾರ್ಮುಜ್ ಜಲಸಂಧಿಯನ್ನು ಗುರಿಯಾಗಿಸಿಕೊಂಡು ಹಾರಿಸಿದ್ದ ಇರಾನ್‌ನ ಡ್ರೋನ್‌ಗಳನ್ನು ಅಮೆರಿಕ ಸೇನೆ ಹೊಡೆದುರುಳಿಸಿದೆ. ಜೊತೆಗೆ ಕೆಶ್ಮ್ ದ್ವೀಪದಲ್ಲಿರುವ ಇರಾನಿನ ಕರಾವಳಿ ಕಣ್ಗಾವಲು ರ್‍ಯಾಡರ್ ತಾಣಗಳ ಮೇಲೂ ದಾಳಿ ನಡೆಸಿದ್ದು, ಇರಾನಿನ ಮಿಲಿಟರಿ ಮೂಲಸೌಕರ್ಯಗಳಿಗೆ ಹಾನಿ ಮಾಡಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ಹೇಳಿಕೊಂಡಿದೆ.

ಹಾರ್ಮುಜ್ ಜಲಸಂಧಿಯತ್ತ ಉಡಾಯಿಸಿದ್ದ ಇರಾನ್‌ನ 4 ಡ್ರೋನ್‌ಗಳನ್ನು ಹೊಡೆದುರುಳಿಸಿದ್ದೇವೆ. ದಾಳಿಗೆ ಪ್ರತಿಯಾಗಿ ಜಲಸಂಧಿಯಲ್ಲಿರುವ 1 ದ್ವೀಪ ಸೇರಿದಂತೆ ಇರಾನ್‌ನ ಕರಾವಳಿ ಕಣ್ಣಾವಲು ರ್‍ಯಾಡರ್ ಕೇಂದ್ರಗಳ ಮೇಲೆ ದಾಳಿ ನಡೆಸಿದ್ದೇವೆ ಎಂದು ಅಮೆರಿಕ ತಿಳಿಸಿದೆ.

ಇರಾನ್ ಉಡಾಯಿಸಿದ್ದ ಡ್ರೋನ್‌ಗಳು ಹಾರ್ಮುಜ್‌ನಲ್ಲಿ ಹಡಗುಗಳ ಸಂಚಾರಕ್ಕೆ ಆತಂಕ ತಂದೊಡ್ಡಿದ್ದವು. ಹೀಗಾಗಿ ಮುಂದಿನ ದಾಳಿಗಳನ್ನು ತಡೆಯುವ ಉದ್ದೇಶದಿಂದ ಯುಎಸ್ ಮಿಲಿಟರಿ ಗೋರುಕ್ ಮತ್ತು ಕೆಶ್ಮ್ ದ್ವೀಪಗಳಲ್ಲಿನ ಇರಾನಿನ ಕರಾವಳಿ ಕಣ್ಗಾವಲು ರ್‍ಯಾಡರ್ ತಾಣಗಳ ಮೇಲೆ ದಾಳಿ ನಡೆದಿದೆ. ಕ್ವೆಶ್ಮ್ ದ್ವೀಪಗಳು ಬಂದರ್ ಅಬ್ಬಾಸ್ ಮತ್ತು ಲಾರೆಕ್ ಬಳಿ ಇವೆ. ದಾಳಿ ಬಳಿಕ ಇದು ಸ್ವರಕ್ಷಣೆಗಾಗಿ ಅಮೆರಿಕ ಮಿಲಿಟರಿ ಪ್ರತಿಕ್ರಿಯಿಸುವುದನ್ನು ಮುಂದುವರಿಸುವುದಾಗಿ ಹೇಳಿದೆ. ಇರಾನ್ ಮೇಲಿನ ಟ್ರಂಪ್ ಆಡಳಿತದ ಒತ್ತಡ ಹೆಚ್ಚಾಗುತ್ತಿರುವ ಬೆನ್ನಲ್ಲೇ ಈ ಘಟನೆ ನಡೆದಿದ್ದು, ಪ್ರಸ್ತುತ ಇರುವ ಕದನ ವಿರಾಮಕ್ಕೆ ಮತ್ತಷ್ಟು ಅಪಾಯ ಎದುರಾಗಿದೆ.

ಜಾಗತಿಕ ತೈಲ ಮತ್ತು ನೈಸರ್ಗಿಕ ಅನಿಲ ಸಾಗಣೆಯ ಪ್ರಮುಖ ಮಾರ್ಗವಾಗಿರುವ ಹಾರ್ಮುಜ್ ಜಲಸಂಧಿಯ ಮೇಲೆ ಇರಾನ್ ಹಿಡಿತ ಸಾಧಿಸಲು ಯತ್ನಿಸುತ್ತಿದೆ. ಇದಕ್ಕೆ ಪ್ರತಿಯಾಗಿ ಅಮೆರಿಕ ಸೇನೆಯು ಇರಾನ್‌ನ ಬಂದರುಗಳ ಮೇಲೆ ದಿಗ್ಬಂಧನ ವಿಧಿಸುತ್ತಿದೆ. ಅಮೆರಿಕ–ಇರಾನ್ ಸಂಘರ್ಷದಿಂದಾಗಿ

ಭಾರತ ಸಾರಥಿ
08/06/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಎರಡು ವರ್ಷದ ವೃತ್ತಿಪರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮ ಆರಂಭ

ಬೆಂಗಳೂರು

ಫಿಸಿಕ್ಸ್ ವಾಲಾ ಇನ್‌ಸ್ಟಿಟ್ಯೂಟ್ ಆಫ್ ಇನ್ನೋವೇಶನ್ (ಪಿ.ಡಬ್ಲ್ಯೂ.ಐ.ಒ.ಐ.) ಸಂಸ್ಥೆಯು ತನ್ನ ಬೆಂಗಳೂರು ಕ್ಯಾಂಪಸ್‌ನಲ್ಲಿ ಎರಡು ವರ್ಷದ ಪೂರ್ಣಾವಧಿಯ 'ವೃತ್ತಿಪರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮ'ವನ್ನು ಆರಂಭಿಸಿದೆ. ಈ ಕಾರ್ಯಕ್ರಮವು ಎರಡು ವಿಶೇಷ ಅಧ್ಯಯನ ವಿಭಾಗಗಳನ್ನು ಒಳಗೊಂಡಿದೆ ಪ್ರಾಡಕ್ಟ್ ಮ್ಯಾನೇಜ್‌ಮೆಂಟ್ ಮತ್ತು ಬಿಸಿನೆಸ್ ಅನಾಲಿಟಿಕ್ಸ್ (ಪಿ.ಬಿ.ಎ.) ಹಾಗೂ



ಸ್ಟಾರ್ಟ್‌ಅಪ್ ಮತ್ತು ಬಿಸಿನೆಸ್ ಲೀಡರ್‌ಶಿಪ್ (ಎಸ್.ಬಿ.ಎಲ್.). ಈ ಎರಡೂ ವಿಭಾಗಗಳನ್ನು ಪ್ರಾಡಕ್ಟ್ ಮ್ಯಾನೇಜ್‌ಮೆಂಟ್, ಅನಾಲಿಟಿಕ್ಸ್ ಮತ್ತು ಉದ್ಯಮಶೀಲತೆ ಕ್ಷೇತ್ರಗಳಲ್ಲಿ ವೃತ್ತಿಜೀವನ ರೂಪಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾಗಿದೆ.

ಈ ಕೋರ್ಸ್ ಅನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಬಳಿಕ ವಿದ್ಯಾರ್ಥಿಗಳಿಗೆ ಮೇಧಾವಿ ಸ್ಕಿಲ್ಸ್ ವಿಶ್ವವಿದ್ಯಾಲಯದಿಂದ ಪದವಿ ಪ್ರದಾನ ಮಾಡಲಾಗುತ್ತದೆ.

ಕಾರ್ಯಕ್ರಮದ ಪಠ್ಯಕ್ರಮವು ಮೊದಲ ಸೆಮಿಸ್ಟರ್‌ನಲ್ಲಿ ಎಲ್ಲ ವಿದ್ಯಾರ್ಥಿಗಳಿಗೂ ಸಾಮಾನ್ಯ ವಿಷಯಗಳೊಂದಿಗೆ ಆರಂಭವಾಗುತ್ತದೆ. ಇದರಲ್ಲಿ ವ್ಯವಹಾರ ಅರ್ಥಶಾಸ್ತ್ರ, ಹಣಕಾಸು ಸಾಕ್ಷರತೆ, ಮಾರುಕಟ್ಟೆ ನಿರ್ವಹಣೆ, ಸಾಮಾನ್ಯ ಮ್ಯಾನೇಜ್‌ಮೆಂಟ್ ಹಾಗೂ ಸಂವಹನ ಕೌಶಲ್ಯ ವಿಷಯಗಳು ಒಳಗೊಂಡಿರುತ್ತವೆ.

ಎರಡನೇ ಸೆಮಿಸ್ಟರ್‌ನಿಂದ ವಿದ್ಯಾರ್ಥಿಗಳು ತಮ್ಮ ಆಯ್ಕೆಯ ವಿಶೇಷ ಅಧ್ಯಯನ ವಿಭಾಗಗಳಿಗೆ ವಿಭಜನೆಗೊಳ್ಳುತ್ತಾರೆ.

ಪಿ.ಬಿ.ಎ. ವಿಭಾಗದ ವಿದ್ಯಾರ್ಥಿಗಳು ಪ್ರಾಡಕ್ಟ್ ಮ್ಯಾನೇಜ್‌ಮೆಂಟ್, ಬಿಸಿನೆಸ್ ಇಂಟೆಲಿಜೆನ್ಸ್ ಉಪಕರಣಗಳು, ಎಸ್‌ಕ್ಯೂಎಲ್, ಪವರ್ ಬಿಐ, ಟ್ಯಾಬ್ಲೋ, ಯುಐ/ಯುಎಕ್ಸ್, ಡಿಜಿಟಲ್ ಮಾರ್ಕೆಟಿಂಗ್ ಹಾಗೂ ಎಂವಿಪಿ ಅಭಿವೃದ್ಧಿ ಕುರಿತಾಗಿ ಅಭ್ಯಾಸ ಮಾಡಲಿದ್ದಾರೆ. ಎಸ್.ಬಿ.ಎಲ್. ವಿಭಾಗದ ವಿದ್ಯಾರ್ಥಿಗಳು ವೆಂಚರ್ ನಿರ್ಮಾಣ, ಅವಕಾಶಗಳ ಗುರುತಿಸುವಿಕೆ, ವೆಂಚರ್ ಹಣಕಾಸು, ಯೂನಿಟ್ ಅರ್ಥಶಾಸ್ತ್ರ, ವಿನ್ಯಾಸ ಚಿಂತನೆ ಹಾಗೂ ಬೌದ್ಧಿಕ ಆಸ್ತಿ ಹಕ್ಕುಗಳ ಕುರಿತು ತರಬೇತಿ ಪಡೆಯಲಿದ್ದಾರೆ.

# ಭಾರತೀಯ ಶಸ್ತ್ರಚಿಕಿತ್ಸಕರ ಐತಿಹಾಸಿಕ ಸಾಧನೆ

ಮೈಸೂರು

ಭಾರತದಲ್ಲಿ ಅಭಿವೃದ್ಧಿಪಡಿಸಲಾದ ರೋಬೋಟಿಕ್ ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯರ ಪರಿಣತಿ ಮತ್ತೊಮ್ಮೆ ಜಗತ್ತನ್ನು ಬೆರಗುಗೊಳಿಸಿದೆ. ಖ್ಯಾತ ಹೃದಯ ಶಸ್ತ್ರಚಿಕಿತ್ಸಕ ಡಾ. ಸುಧೀರ್ ಶ್ರೀವಾಸ್ತವ ಅವರು ಗಯಾನಾದಲ್ಲಿ ಕುಳಿತು ಭಾರತದಲ್ಲಿನ ಇಂದೋರ್‌ನೊಬ್ಬ ರೋಗಿಯ ಹೃದಯದ ಮೇಲೆ ಯಶಸ್ವಿ ರೋಬೋಟಿಕ್ ಟೆಲಿ-ಶಸ್ತ್ರಚಿಕಿತ್ಸೆ ನಡೆಸುವ ಮೂಲಕ ವೈದ್ಯಕೀಯ ಇತಿಹಾಸದಲ್ಲಿ ಹೊಸ ವಿಶ್ವದಾಖಲೆ ನಿರ್ಮಿಸಿದ್ದಾರೆ.



ಸುಮಾರು 20,000 ಕಿಲೋಮೀಟರ್ ದೂರದಿಂದ ನಡೆಸಲಾದ ಈ ಶಸ್ತ್ರಚಿಕಿತ್ಸೆ, ಇದುವರೆಗೆ ನಡೆದಿರುವ ವಿಶ್ವದ ಅತಿ ದೂರದ ರೋಬೋಟ್-ಸಹಾಯಿತ ಹೃದಯ ಟೆಲಿ-ಶಸ್ತ್ರಚಿಕಿತ್ಸೆ ಎಂದು ಪರಿಗಣಿಸಲಾಗಿದೆ. ಈ ಐತಿಹಾಸಿಕ ಪ್ರಕ್ರಿಯೆ ಗಯಾನಾದ ಜಾರ್ಜ್‌ಟೌನ್ ಪಬ್ಲಿಕ್ ಹಾಸ್ಪಿಟಲ್ ಕಾರ್ಪೊರೇಶನ್ ಹಾಗೂ ಭಾರತದ ಐಆರ್‌ಸಿಎಡಿ ಇಂಡಿಯಾ, ಇಂದೋರ್ ನಡುವೆ ಯಶಸ್ವಿಯಾಗಿ ಪೂರ್ಣಗೊಂಡಿತು.

ಈ ಸಾಧನೆಯ ವಿಶೇಷತೆ ಎಂದರೆ, ಈ ಶಸ್ತ್ರಚಿಕಿತ್ಸೆಯನ್ನು ಸಂಪೂರ್ಣವಾಗಿ ಭಾರತದಲ್ಲಿ ಅಭಿವೃದ್ಧಿಪಡಿಸಲಾದ ಎಸ್‌ಎಸ್‌ಐ ಮಂತ್ರಾ ಸರ್ಜಿಕಲ್ ರೋಬೋಟಿಕ್ ಸಿಸ್ಟಮ್ ಸಹಾಯದಿಂದ ನಡೆಸಲಾಗಿದೆ. ಇದರಿಂದ ಜಾಗತಿಕ ರೋಬೋಟಿಕ್ ಶಸ್ತ್ರಚಿಕಿತ್ಸಾ ಕ್ಷೇತ್ರದಲ್ಲಿ ಭಾರತಕ್ಕೆ ಹೊಸ ಗುರುತು ದೊರೆತಿದೆ.

# ಹಾರ್ಡ್‌ವಿನ್ ಇಂಡಿಯಾ ಲಿಮಿಟೆಡ್‌ಗೆ ದಾಖಲೆಯ ವಾರ್ಷಿಕ ಆದಾಯ

ನವದೆಹಲಿ: ಹಾರ್ಡ್‌ವಿನ್ ಇಂಡಿಯಾ ಲಿಮಿಟೆಡ್ 2026ರ ಮಾರ್ಚ್ 31ಕ್ಕೆ ಅಂತ್ಯಗೊಂಡ ಹಣಕಾಸು ವರ್ಷದ ಲೆಕ್ಕಪರಿಶೋಧಿತ ಹಣಕಾಸು ಫಲಿತಾಂಶಗಳನ್ನು ಪ್ರಕಟಿಸಿದ್ದು, ಕಂಪನಿಯ ಇತಿಹಾಸದಲ್ಲೇ ಅತಿ ಹೆಚ್ಚು ವಾರ್ಷಿಕ ಆದಾಯ ದಾಖಲಿಸಿದೆ.

Hardwyn Since 1965 Perfection Redefined

ಕಂಪನಿಯು 2025-26ನೇ ಹಣಕಾಸು ವರ್ಷದಲ್ಲಿ ರೂ.20,041.35 ಲಕ್ಷಗಳ ಒಟ್ಟು ಆದಾಯ ಗಳಿಸಿದ್ದು, 2024-25ನೇ ಸಾಲಿನ ರೂ.18,537.39 ಲಕ್ಷಗಳ ಆದಾಯಕ್ಕೆ ಹೋಲಿಸಿದರೆ ಗಮನಾರ್ಹ ಬೆಳವಣಿಗೆಯನ್ನು ಸಾಧಿಸಿದೆ. ಇದೇ ಅವಧಿಯಲ್ಲಿ ಕಂಪನಿಯ ನಿವ್ವಳ ಲಾಭ ರೂ.1,320.58 ಲಕ್ಷಗಳಾಗಿದ್ದು, ಹಿಂದಿನ ವರ್ಷದ ರೂ.1,123.12 ಲಕ್ಷಗಳಿಗೆ ಹೋಲಿಸಿದರೆ ಶೇ.17.58ರಷ್ಟು ಹೆಚ್ಚಳವಾಗಿದೆ.

2025-26ರ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ಕಂಪನಿಯು ರೂ.5,747.42 ಲಕ್ಷಗಳ ಆದಾಯ ಹಾಗೂ ರೂ.342.94 ಲಕ್ಷಗಳ ನಿವ್ವಳ ಲಾಭ ದಾಖಲಿಸಿದ್ದು, ಹೊಸ ಹಣಕಾಸು ವರ್ಷಕ್ಕೂ ಬಲಿಷ್ಠ ಆರಂಭದ ಸೂಚನೆ ನೀಡಿದೆ.

ಕಂಪನಿಯ ಪ್ರತಿ ಷೇರಿನ ಗಳಿಕೆ (ಇಪಿಎಸ್) 2025-26ನೇ ಸಾಲಿನಲ್ಲಿ ರೂ.0.27ಕ್ಕೆ ಏರಿಕೆಯಾಗಿದ್ದು, ಹಿಂದಿನ ವರ್ಷ ಇದು ರೂ.0.23 ಆಗಿತ್ತು. ಇದೇ ವೇಳೆ ದೀರ್ಘಾವಧಿಯ ಹೂಡಿಕೆದಾರರ ಮೌಲ್ಯ ಹೆಚ್ಚಿಸುವ ಉದ್ದೇಶದಿಂದ ಬೋನಸ್ ಷೇರುಗಳ ವಿತರಣೆಯನ್ನೂ ಕಂಪನಿ ಪರಿಗಣಿಸಿದೆ.

# ಭಾರತದ ಮೂಲಸೌಕರ್ಯ ಇತಿಹಾಸದಲ್ಲಿ ಜೋಜಿಲಾ ಹೊಸ ಅಧ್ಯಾಯ

ಶ್ರೀನಗರ/ಲೇಹ್

ಜಮ್ಮು-ಕಾಶ್ಮೀರ ಮತ್ತು ಲಡಾಖ್ ನಡುವಿನ ಸಂಪರ್ಕಕ್ಕೆ ಹೊಸ ದಿಕ್ಕು ನೀಡಲಿರುವ ಜೋಜಿಲಾ ರಸ್ತೆ ಸುರಂಗ ಯೋಜನೆ ಮಹತ್ವದ ಮೈಲಿಗಲ್ಲು ತಲುಪಿದೆ.

13.153 ಕಿ.ಮೀ. ಉದ್ದದ ಜೋಜಿಲಾ ಸುರಂಗವನ್ನು ಬೇಧಿಸುವ ಕ್ಷಣಕ್ಕೆ ಸಾಕ್ಷಿಯಾಗಲಿದೆ. ಇದು ಭಾರತದ ಮೂಲಸೌಕರ್ಯ ಇತಿಹಾಸದಲ್ಲಿ ಐತಿಹಾಸಿಕ ಕ್ಷಣವೆಂದು ಪರಿಗಣಿಸಲಾಗಿದೆ.

ಸಮುದ್ರ ಮಟ್ಟದಿಂದ ಸುಮಾರು 11,578 ಅಡಿ ಎತ್ತರದಲ್ಲಿರುವ ಈ ಸುರಂಗವು ವಿಶ್ವದ ಅತಿ ಎತ್ತರದಲ್ಲಿರುವ ಅತಿ ಉದ್ದದ ಏಕ-ಟ್ಯೂಬ್ ದ್ವಿಮುಖ ರಸ್ತೆ ಸುರಂಗ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಶ್ರೀನಗರದ ಸಮೀಪದ ಸೋನ್‌ಮಾರ್ಗ್‌ನ ಬಾಲ್ತಾಲ್ ಮತ್ತು ದ್ರಾಸ್-ಕಾರ್ಗಿಲ್ ಪ್ರದೇಶದ ಮೀನಾಮಾರ್ಗ್ ನಡುವಿನ ಈ ಯೋಜನೆ, ಹಲವು ತಿಂಗಳುಗಳ ಕಾಲ ಹಿಮಪಾತ ಹಾಗೂ ಹಿಮಪಾತದ ಅಪಾಯದಿಂದ ಕಡಿತಗೊಳ್ಳುವ ಸಂಪರ್ಕ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಲಿದೆ.

ರಾಷ್ಟ್ರೀಯ ಹೆದ್ದಾರಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ (ಎನ್‌ಎಚ್‌ಐಡಿಸಿಎಲ್) ಪರವಾಗಿ ಮೆಘಾ ಎಂಜಿನಿಯರಿಂಗ್ ಅಂಡ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ (ಎಂಇಐಎಲ್) ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಕಾರ್ಯಗತಗೊಳಿಸುತ್ತಿದೆ. ಹಿಮಾಲಯದ ಸಂಕೀರ್ಣ ಭೂವೈಜ್ಞಾನಿಕ ಪರಿಸ್ಥಿತಿಗೆ ಅನುಗುಣವಾಗಿ "ನ್ಯೂ ಆಸ್ಟ್ರಿಯನ್ ಟನ್ನೆಲಿಂಗ್ ಮೆಥಡ್" ತಂತ್ರಜ್ಞಾನ ಬಳಸಿ ಈ ಸುರಂಗ



ನಿರ್ಮಿಸಲಾಗಿದೆ.

ಈ ಸುರಂಗ ಮಾರ್ಗ ಪೂರ್ಣಗೊಂಡ ಬಳಿಕ ಶ್ರೀನಗರ ಮತ್ತು ಲಡಾಖ್ ನಡುವಿನ ಸಂಪರ್ಕ ವರ್ಷಪೂರ್ತಿ ಲಭ್ಯವಾಗಲಿದೆ.

ದ್ರಾಸ್, ಕಾರ್ಗಿಲ್, ಲೇಹ್ ಸೇರಿದಂತೆ ಗಡಿಯ ಸೂಕ್ಷ್ಮ ಪ್ರದೇಶಗಳಿಗೆ ಜನರ ಹಾಗೂ ಸರಕುಗಳ ಸಂಚಾರ ಸುಗಮವಾಗಲಿದ್ದು, ಪ್ರವಾಸೋದ್ಯಮ, ವ್ಯಾಪಾರ ಹಾಗೂ ತುರ್ತು ಸೇವೆಗಳಿಗೆ ಉತ್ತೇಜನ ಸಿಗಲಿದೆ. ರಾಷ್ಟ್ರದ ಭದ್ರತೆ ಮತ್ತು ಸೇನಾ ಲಾಜಿಸ್ಟಿಕ್ಸ್ ದೃಷ್ಟಿಯಿಂದಲೂ ಈ ಸುರಂಗ ಅತ್ಯಂತ ಮಹತ್ವದ್ದಾಗಿದೆ.

ಕಳೆದ ಐದು ವರ್ಷಗಳಲ್ಲಿ ಯೋಜನಾ ಪ್ರದೇಶದಲ್ಲಿ ಐದು ಪ್ರಮುಖ ಹಿಮಕುಸಿತ ಘಟನೆಗಳು ಸಂಭವಿಸಿದ್ದವು. 2023ರ ಜನವರಿಯಲ್ಲಿ ಸಂಭವಿಸಿದ ಭಾರೀ ಹಿಮಕುಸಿತದಲ್ಲಿ 172 ಕಾರ್ಮಿಕರನ್ನು ಭಾರತೀಯ ಸೇನೆ ಸುರಕ್ಷಿತವಾಗಿ ರಕ್ಷಿಸಿತ್ತು. ಆದಾಗ್ಯೂ ಯೋಜನಾ ತಂಡ ನಿರಂತರವಾಗಿ ಕಾಮಗಾರಿ ಮುಂದುವರಿಸಿ ಇದೀಗ ಐತಿಹಾಸಿಕ ಸಾಧನೆಗೆ ಸಾಕ್ಷಿಯಾಗಲು ಸಜ್ಜಾಗಿದೆ.

ಯೋಜನೆಯಲ್ಲಿ ಇದುವರೆಗೆ 10 ಮಿಲಿಯನ್‌ಗಿಂತ ಹೆಚ್ಚು ಸುರಕ್ಷಿತ ಮಾನವ-ಗಂಟೆಗಳ ಕಾರ್ಯನಿರ್ವಹಣೆ ದಾಖಲಾಗಿದ್ದು, 1,200ಕ್ಕೂ ಹೆಚ್ಚು ಸಿಬ್ಬಂದಿ ಯೋಜನೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಇವರಲ್ಲಿ ಶೇ.80ರಷ್ಟು ಸ್ಥಳೀಯ ನಿವಾಸಿಗಳಾಗಿದ್ದಾರೆ.

ಜೋಜಿಲಾ ಸುರಂಗದ ಅಂತಿಮ ಬ್ರೇಕ್‌ಥ್ರೂ (ಬೇಧಿಸುವ) ಭಾರತದ ಸುರಂಗ ನಿರ್ಮಾಣ ಕ್ಷೇತ್ರದ ಮಹತ್ವದ ಸಾಧನೆಯಾಗಿದ್ದು, ಕಾಶ್ಮೀರ ಮತ್ತು ಲಡಾಖ್ ನಡುವಿನ ಸರ್ವಋತು ಸಂಪರ್ಕದ ದೀರ್ಘಕಾಲದ ಕನಸನ್ನು ನನಸಾಗಿಸುವತ್ತ ಮಹತ್ವದ ಹೆಜ್ಜೆಯಾಗಿದೆ.

ಇದು ದೇಶದ ಮೂಲಸೌಕರ್ಯ ಅಭಿವೃದ್ಧಿ ಸಾಮರ್ಥ್ಯಕ್ಕೆ ಮತ್ತೊಂದು ಹೆಮ್ಮೆಯ ಗರಿಯಾಗಿದೆ.

# ಹಿಂದುಳಿದ ವರ್ಗಗಳ ಏಳಿಗೆಗೆ ಪಂಚ ಭರವಸೆಗಳು

ನವದೆಹಲಿ: ವಿಕಾಸಶೀಲ ಇನ್ಸಾನ್ ಪಾರ್ಟಿ (ವಿಐಪಿ) ಕರ್ನಾಟಕದಲ್ಲಿ ಹಿಂದುಳಿದ ವರ್ಗಗಳು, ಶೋಷಿತರು ಹಾಗೂ ಅಲೆಮಾರಿ ಸಮುದಾಯಗಳ ಸಬಲೀಕರಣಕ್ಕಾಗಿ ಐದು ಪ್ರಮುಖ ಭರವಸೆಗಳನ್ನು ಘೋಷಿಸಿದೆ. ಶಿಕ್ಷಣ, ಉದ್ಯೋಗ, ರಾಜಕೀಯ ಪ್ರಾತಿನಿಧ್ಯ, ಸಾಮಾಜಿಕ ನ್ಯಾಯ ಹಾಗೂ ಆರ್ಥಿಕ ಸಬಲೀಕರಣಕ್ಕೆ ಆದ್ಯತೆ ನೀಡುವ ಮೂಲಕ ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಅಧಿಕಾರದ ಕೇಂದ್ರಬಿಂದುವಿಗೆ ತರುವ ಸಂಕಲ್ಪವನ್ನು ಪಕ್ಷ ವ್ಯಕ್ತಪಡಿಸಿದೆ.

ಪಕ್ಷದ ಸಂಸ್ಥಾಪಕ ಮುಕೇಶ್ ಸಹಾನಿ ಅವರು ಮಾತನಾಡಿ, ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹಾಗೂ ಅಧಿಕಾರ ಹಂಚಿಕೆ ಜಾರಿಯಾಗಬೇಕು ಎಂದು ಒತ್ತಾಯಿಸಿದರು. ದೇಶದ ವಿವಿಧ ಭಾಗಗಳಲ್ಲಿ ಹಿಂದುಳಿದ ಮತ್ತು ಶ್ರಮಿಕ ಸಮುದಾಯಗಳು ಎದುರಿಸುತ್ತಿರುವ ಅನ್ಯಾಯವನ್ನು ನಿವಾರಿಸಲು ರಾಜಕೀಯ ಅಧಿಕಾರವೇ ಪ್ರಮುಖ ಸಾಧನವಾಗಿದೆ ಎಂದು ಅವರು ಹೇಳಿದರು.

ಪಕ್ಷವು ಶಿಕ್ಷಣ ಕ್ಷೇತ್ರದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶಗಳು, ವಿದ್ಯಾರ್ಥಿವೇತನ ಹಾಗೂ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸುವ ಭರವಸೆ ನೀಡಿದೆ. ಜೊತೆಗೆ ಉದ್ಯೋಗ ಸೃಷ್ಟಿ ಮತ್ತು ಸ್ವಯಂ ಉದ್ಯೋಗಕ್ಕೆ ಉತ್ತೇಜನ ನೀಡುವ ಮೂಲಕ ಆರ್ಥಿಕವಾಗಿ ದುರ್ಬಲ ವರ್ಗಗಳನ್ನು ಬಲಪಡಿಸುವ ಗುರಿ ಹೊಂದಿದೆ.

ಅಲೆಮಾರಿ, ಮೀನುಗಾರ, ನಿಷಾದ್, ಕೋಲಿ, ಮಲ್ಲಾಹ್ ಸೇರಿದಂತೆ ವಿವಿಧ ಶ್ರಮಿಕ ಸಮುದಾಯಗಳಿಗೆ ಸೂಕ್ತ ಮೀಸಲಾತಿ ಮತ್ತು ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವುದು ಪಕ್ಷದ ಪ್ರಮುಖ ಆದ್ಯತೆಯಾಗಿದೆ. ಸ್ಥಳೀಯ ಸಂಸ್ಥೆಗಳಿಂದ ಹಿಡಿದು ವಿಧಾನಸಭೆ ಮತ್ತು ಸಂಸತ್ತಿನವರೆಗೆ ಹಿಂದುಳಿದ ಸಮುದಾಯಗಳ ಧ್ವನಿ ಪ್ರತಿಧ್ವನಿಸುವಂತೆ ಮಾಡುವ ಭರವಸೆಯನ್ನು ಪಕ್ಷ ನೀಡಿದೆ.

# ಜಾಗತಿಕ ಪ್ರದರ್ಶನ ದಿನ 2026

ಬೆಂಗಳೂರು: ಭಾರತೀಯ ಪ್ರದರ್ಶನ ಉದ್ಯಮ ಸಂಘಟನೆಯ ದಕ್ಷಿಣ ವಲಯದ ವತಿಯಿಂದ ಜಾಗತಿಕ ಪ್ರದರ್ಶನ ದಿನ-2026 ಅನ್ನು ಬೆಂಗಳೂರು ಅಂತರರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಈ ಕಾರ್ಯಕ್ರಮದಲ್ಲಿ ಪ್ರದರ್ಶನ ಉದ್ಯಮದ ಪ್ರಮುಖ ನಾಯಕರು, ಆಯೋಜಕರು, ವೇದಿಕೆ ನಿರ್ವಹಕರು, ಸೇವಾ ಪೂರೈಕೆದಾರರು ಹಾಗೂ ವಿವಿಧ ಕ್ಷೇತ್ರಗಳ ಹಿತಾಸಕ್ತರು ಭಾಗವಹಿಸಿ, ನವೀನತೆ, ಸಹಯೋಗ ಮತ್ತು ಆರ್ಥಿಕ ಬೆಳವಣಿಗೆಯಲ್ಲಿ ಪ್ರದರ್ಶನ ಉದ್ಯಮದ ಪಾತ್ರವನ್ನು ಒತ್ತಿ ಹೇಳಲಿದ್ದಾರೆ.

ಈ ವರ್ಷದ ವಿಶೇಷ ಆಕರ್ಷಣೆಯಾಗಿ ಐಇಐಎ ಮೊದಲ ಬಾರಿಗೆ ರಾಷ್ಟ್ರವ್ಯಾಪಿ 'ಮಶಾಲ್ ರಿಲೇ' ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಉಪಕ್ರಮವು ಬೆಂಗಳೂರು, ದೆಹಲಿ, ಮುಂಬೈ ಹಾಗೂ ಕೊಲ್ಕತ್ತಾ ನಗರಗಳನ್ನು ಪ್ರಗತಿ, ಅವಕಾಶ ಮತ್ತು ಆರ್ಥಿಕ ಅಭಿವೃದ್ಧಿಯ ಸಂದೇಶದೊಂದಿಗೆ ಸಂಪರ್ಕಿಸಲಿದೆ. ನೇರ ಪ್ರಸಾರದ ಮೂಲಕ ನಾಲ್ಕು ವಲಯಗಳನ್ನು ಜೋಡಿಸುವ ಈ ಪ್ರಯತ್ನವು ದೇಶದಾದ್ಯಂತ ಉದ್ಯಮಗಳು, ಉದ್ಯಮಿಗಳು ಮತ್ತು ಮಾರುಕಟ್ಟೆಗಳನ್ನು ಸಂಪರ್ಕಿಸುವಲ್ಲಿ ಪ್ರದರ್ಶನಗಳ ಮಹತ್ವವನ್ನು ಪ್ರತಿಬಿಂಬಿಸಲಿದೆ.

ಜಾಗತಿಕ ಮಟ್ಟದಲ್ಲಿ ಆಚರಿಸಲಾಗುವ ಈ ದಿನವು ವ್ಯಾಪಾರ, ಹೂಡಿಕೆ, ನವೀನತೆ, ಜ್ಞಾನ ವಿನಿಮಯ ಹಾಗೂ ಆರ್ಥಿಕ ಅಭಿವೃದ್ಧಿಗೆ ಪ್ರದರ್ಶನಗಳು ಮತ್ತು ವ್ಯವಹಾರಿಕ ಕಾರ್ಯಕ್ರಮಗಳು ನೀಡುವ ಕೊಡುಗೆಯನ್ನು ಗುರುತಿಸುತ್ತದೆ. ಈ ವರ್ಷದ ಘೋಷವಾಕ್ಯ "ಪ್ರದರ್ಶನಗಳು ಅವಕಾಶಗಳನ್ನು ಸೃಷ್ಟಿಸುತ್ತವೆ" ಎಂಬುದಾಗಿದ್ದು, ಪ್ರದರ್ಶನಗಳು ಉದ್ಯಮಗಳು ಹಾಗೂ ಸಮುದಾಯಗಳಿಗೆ ಹೊಸ ಅವಕಾಶಗಳನ್ನು ಹೇಗೆ ಸೃಷ್ಟಿಸುತ್ತವೆ ಎಂಬುದನ್ನು ಸಾರುತ್ತದೆ.

## ತಂದೆಯ ದಿನದ ಶೈಲಿ ಮಾರ್ಗದರ್ಶಿ: ಅವರು ಪ್ರತಿದಿನ ಬಳಸುವ ಉಡುಗೊರೆಗಳು

ಬೆಂಗಳೂರು

ಅಪ್ಪಂದಿರಿಗಾಗಿ ಉಡುಗೊರೆ ಆಯ್ಕೆ ಮಾಡುವುದು ಅನೇಕ ಬಾರಿ ಕಷ್ಟವಾಗಬಹುದು. ಅವರು ಅಪರೂಪಕ್ಕೆ ಏನನ್ನಾದರೂ ಕೇಳುತ್ತಾರೆ. ಇಷ್ಟಪಟ್ಟ ವಸ್ತುಗಳನ್ನೇ ವರ್ಷಗಳ ಕಾಲ ಬಳಸುತ್ತಾರೆ. ಹಳೆಯದಾದರೂ ಮನಸ್ಸಿಗೆ ಹತ್ತಿರವಾದ ಶರ್ಟ್, ಗಡಿಯಾರ ಅಥವಾ ಪರ್ಸ್ ಅನ್ನು ಬಿಡಲು ಇಷ್ಟಪಡುವುದಿಲ್ಲ. ಅದಕ್ಕಾಗಿಯೇ ಫ್ಯಾಷನ್ ಆಧಾರಿತ ಉಡುಗೊರೆಗಳು ಅತ್ಯುತ್ತಮ ಆಯ್ಕೆಯಾಗುತ್ತವೆಉಪಯುಕ್ತ, ವೈಯಕ್ತಿಕ







ಮತ್ತು ಪ್ರತಿದಿನ ಬಳಕೆಗೆ ತಕ್ಕಂತವು.

ಈ ತಂದೆಯ ದಿನದ ಅಂಗವಾಗಿ, ನೈಕಾ ಫ್ಯಾಷನ್ ಪುರುಷರ ಉಡುಪು, ಪಾದರಕ್ಷೆ ಹಾಗೂ ಪರಿಕರಗಳ ವಿಶೇಷ ಸಂಗ್ರಹವನ್ನು ಪರಿಚಯಿಸಿದೆ. ಆರಾಮ, ಶೈಲಿ ಮತ್ತು ಬಹುಮುಖತೆಯನ್ನು ಒಟ್ಟುಗೂಡಿಸಿರುವ ಈ ಆಯ್ಕೆಗಳು ಪ್ರತಿಯೊಬ್ಬ ತಂದೆಯಿಗೂ ಹೊಂದುವಂತೆ ವಿನ್ಯಾಸಗೊಳಿಸಲಾಗಿದೆ.

ಕೆಲವು ಉಡುಪುಗಳು ಎಂದಿಗೂ ಫ್ಯಾಷನ್‌ನಿಂದ ಹೊರ ಹೋಗುವುದಿಲ್ಲ. ಸರಿಯಾಗಿ ಹೊಂದುವ ಶರ್ಟ್, ಕ್ಲಾಸಿಕ್ ಪೋಲೋ ಟಿ-ಶರ್ಟ್ ಅಥವಾ ಹಗುರವಾದ ಲಿನಿನ್ ಉಡುಪುಗಳು ವಾರ್ಡ್ರೋಬ್‌ಗೆ ಹೊಸತನ ನೀಡುತ್ತವೆ.

# ಕಾಂಪ್ಯಾಕ್ಟ್ ಕ್ವಾಂಟಿನೊ 20 ಡಬ್ಲ್ಯೂ ಲೇಸರ್ ವ್ಯವಸ್ಥೆ ಪರಿಚಯ

ಬೆಂಗಳೂರು

ಪುಣೆಯನ್ನು ಪ್ರಧಾನ ಕಚೇರಿಯಾಗಿಟ್ಟುಕೊಂಡಿರುವ ಜಾಗತಿಕ ವೈದ್ಯಕೀಯ ತಂತ್ರಜ್ಞಾನ ಸಂಸ್ಥೆಯಾದ ಬಯೋಯಾರ್ಡ್ ಮೆಡಿಸಿಸ್, ಬೆಂಗಳೂರಿನಲ್ಲಿ ನಡೆಯುತ್ತಿರುವ ಯುರೋಲಿಥೊಕಾನ್ 2026 ಕಾರ್ಯಕ್ರಮದಲ್ಲಿ ಮೂತ್ರಪಿಂಡದ ಕಲ್ಲಿನ ನಿರ್ವಹಣೆಗೆ ಕ್ವಾಂಟಿನೊ 20 ಡಬ್ಲ್ಯೂ ಥುಲಿಯಮ್ ಫೈಬರ್ ಲೇಸರ್ ವ್ಯವಸ್ಥೆಯನ್ನು ಪರಿಚಯಿಸಿದೆ.

ಭಾರತದಲ್ಲಿ ಮೂತ್ರಪಿಂಡದ ಕಲ್ಲಿನ ಸಮಸ್ಯೆ ಹೆಚ್ಚುತ್ತಿರುವ ಆರೋಗ್ಯ ಸವಾಲಾಗಿ ಪರಿಣಮಿಸುತ್ತಿರುವ ಸಂದರ್ಭದಲ್ಲಿ ಈ ಹೊಸ ತಂತ್ರಜ್ಞಾನವನ್ನು ಪರಿಚಯಿಸಲಾಗಿದೆ. ಅಧ್ಯಯನಗಳ ಪ್ರಕಾರ, ಭಾರತೀಯ ಜನಸಂಖ್ಯೆಯ ಸುಮಾರು ಶೇಕಡಾ 12ರಷ್ಟು ಜನರು ತಮ್ಮ ಜೀವಿತಾವಧಿಯಲ್ಲಿ ಮೂತ್ರಪಿಂಡದ ಕಲ್ಲಿನ ಸಮಸ್ಯೆಗೆ ಒಳಗಾಗುವ ಸಾಧ್ಯತೆಯಿದೆ.

ಹೆಚ್ಚುತ್ತಿರುವ ತಾಪಮಾನ, ನಿರ್ಜಲೀಕರಣ, ಆಹಾರ ಪದ್ಧತಿಗಳ ಬದಲಾವಣೆ ಹಾಗೂ ಜಡ ಜೀವನಶೈಲಿ ಈ ಸಮಸ್ಯೆಯ ಪ್ರಮಾಣ ಹೆಚ್ಚಲು ಪ್ರಮುಖ ಕಾರಣಗಳಾಗಿವೆ. ರೋಗಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆ, ಆಸ್ಪತ್ರೆಗಳು ಮತ್ತು




ಮೂತ್ರಶಾಸ್ತ್ರ ತಜ್ಞರು ಪರಿಣಾಮಕಾರಿ ಕಲ್ಲು ಚಿಕಿತ್ಸೆ, ಕಡಿಮೆ ಆಸ್ಪತ್ರೆ ವಾಸ್ತವ್ಯ ಹಾಗೂ ವೇಗವಾದ ಚೇತರಿಕೆಗೆ ನೆರವಾಗುವ ಕನಿಷ್ಠ ಆಕ್ರಮಣಕಾರಿ ತಂತ್ರಜ್ಞಾನಗಳನ್ನು ಹೆಚ್ಚಾಗಿ ಅಳವಡಿಸಿಕೊಳ್ಳುತ್ತಿದ್ದಾರೆ.

ಈ ಬದಲಾಗುತ್ತಿರುವ ವೈದ್ಯಕೀಯ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಕ್ವಾಂಟಿನೊ 20 ಡಬ್ಲ್ಯೂ ಥುಲಿಯಮ್ ಫೈಬರ್ ಲೇಸರ್ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದೆ. ಕಲ್ಲು ವಿಘಟನೆ ಕಾರ್ಯವಿಧಾನಗಳಿಗೆ ಅನುಕೂಲವಾಗುವಂತೆ ವಿನ್ಯಾಸಗೊಳಿಸಲಾದ ಈ ಕಾಂಪ್ಯಾಕ್ಟ್ ವ್ಯವಸ್ಥೆ, ಬಯೋಯಾರ್ಡ್ ಮೆಡಿಸಿಸ್‌ನ ಈಗಿರುವ ಕ್ವಾಂಟಿನೊ ಪೋರ್ಟ್ಫೋಲಿಯೊವನ್ನು ವಿಸ್ತರಿಸುತ್ತದೆ. ಈ ಪೋರ್ಟ್ಫೋಲಿಯೊದಲ್ಲಿ ಈಗಾಗಲೇ 40 ಡಬ್ಲ್ಯೂ ಮತ್ತು 75 ಡಬ್ಲ್ಯೂ ವೇದಿಕೆಗಳು ಸೇರಿವೆ. ಕಂಪನಿಯ ಸ್ಮಾರ್ಟ್ ಆಪರೇಷನ್ ರೂಮ್ ಪರಿಸರ ವ್ಯವಸ್ಥೆಯೊಂದಿಗೆ ಸಂಯೋಜಿಸಲ್ಪಟ್ಟಿರುವ ಈ ಪರಿಹಾರವು ಲೇಸರ್ ತಂತ್ರಜ್ಞಾನವನ್ನು ದೃಶ್ಯೀಕರಣ, ನೀರಾವರಿ, ಹೀರುವಿಕೆ ಮತ್ತು ಕಾರ್ಯನಿರ್ವಹಣಾ ವ್ಯವಸ್ಥೆಗಳೊಂದಿಗೆ ಒಗ್ಗೂಡಿಸುತ್ತದೆ. ಇದರಿಂದ ವೈದ್ಯರು ಕಲ್ಲಿನ ಚಿಕಿತ್ಸಾ ಕಾರ್ಯವಿಧಾನಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಲು ಸಾಧ್ಯವಾಗುತ್ತದೆ.

# ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಯಲ್ಲಿ ಹೆಚ್‌ಡಿಕೆ



ನವದೆಹಲಿ

ಎಚ್.ಡಿ. ಕುಮಾರಸ್ವಾಮಿ ಅವರು ಕಿರ್ಗಿಜ್ ಗಣರಾಜ್ಯದ ಇಸ್ಸಿಕ್-ಕುಲ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಸ್ಥೆ ಸದಸ್ಯ ರಾಷ್ಟ್ರಗಳ ಕೈಗಾರಿಕಾ ಸಚಿವರ ನಾಲ್ಕನೇ ಶೃಂಗಸಭೆಯಲ್ಲಿ ಭಾಗವಹಿಸಿ ಭಾರತದ ಕೈಗಾರಿಕಾ ಸಹಕಾರ ಮತ್ತು ಆರ್ಥಿಕ ಬದ್ಧತೆಯನ್ನು ಜಾಗತಿಕ ವೇದಿಕೆಯಲ್ಲಿ ಪ್ರಸ್ತುತಪಡಿಸಿದರು.

ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾಗಿರುವ ಕುಮಾರಸ್ವಾಮಿ ಅವರು ಸದಸ್ಯ ರಾಷ್ಟ್ರಗಳ ನಡುವೆ ಕೈಗಾರಿಕಾ ಬೆಳವಣಿಗೆ, ಪರಿಣಾಮಕಾರಿ ಪೂರೈಕೆ ಸರಪಳಿ, ಉತ್ಪಾದನಾ ವೃದ್ಧಿ ಮತ್ತು ಆರ್ಥಿಕ ಸಹಭಾಗಿತ್ವ ಬಲಪಡಿಸುವ ಅಗತ್ಯವನ್ನು ಒತ್ತಿ ಹೇಳಿದರು. ಶೃಂಗಸಭೆಯಲ್ಲಿ ಜಂಟಿ ಸಂವಹನ, ಮುಂದಿನ ಸಹಕಾರ ಕಾರ್ಯಕ್ರಮಗಳು ಹಾಗೂ ಸುಸ್ಥಿರ ಕೈಗಾರಿಕಾ ಅಭಿವೃದ್ಧಿ ಕುರಿತಂತೆ ಸದಸ್ಯ ರಾಷ್ಟ್ರಗಳ ಸಚಿವರೊಂದಿಗೆ ವಿಸ್ತೃತ ಚರ್ಚೆ ನಡೆಸಿದರು.

ಶೃಂಗಸಭೆಯ ಅಂಗವಾಗಿ ಸಚಿವ ಕುಮಾರಸ್ವಾಮಿ ಅವರು ಹಲವು ದೇಶಗಳ ಸಚಿವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಇರಾನ್ ದೇಶದ ಕೈಗಾರಿಕೆ, ಗಣಿ ಮತ್ತು ವ್ಯಾಪಾರ ಸಚಿವ ಸಯ್ಯದ್ ಮೊಹಮ್ಮದ್ ಅಟಾಬೆಕ್ ಅವರೊಂದಿಗೆ ಕೈಗಾರಿಕಾ ಪಾಲುದಾರಿಕೆ ಹಾಗೂ ವ್ಯಾಪಾರ ಸಹಕಾರ ವಿಸ್ತರಣೆಯ ಕುರಿತು ಸಮಾಲೋಚನೆ ನಡೆಸಿದರು. ಇದೇ ವೇಳೆ ತಜಿಕಿಸ್ತಾನ್ ದೇಶದ ಕೈಗಾರಿಕೆ ಮತ್ತು ನವೀನ ತಂತ್ರಜ್ಞಾನಗಳ ಸಚಿವ ಶೇರಾಲಿ ಕಬೀರ್ ಅವರೊಂದಿಗೆ ತಂತ್ರಜ್ಞಾನ ಸಹಕಾರ, ಕೈಗಾರಿಕಾ ಸಂಬಂಧ ಬಲಪಡಿಸುವುದು ಹಾಗೂ ಹೊಸ ಹೂಡಿಕೆ ಅವಕಾಶಗಳ ಕುರಿತು ಚರ್ಚಿಸಿದರು.

ಹಾಗೆಯೇ ಉಜ್ಬೇಕಿಸ್ತಾನ್ ದೇಶದ ಹೂಡಿಕೆ, ಕೈಗಾರಿಕೆ ಮತ್ತು ವಾಣಿಜ್ಯ ಸಚಿವ ಲಾಜಿಜ್ ಕುದ್ರಾತೋವ್ ಅವರೊಂದಿಗೆ ಆರ್ಥಿಕ ಸಂಬಂಧ ವೃದ್ಧಿ, ಉತ್ಪಾದನಾ ವಲಯದಲ್ಲಿ ಹೂಡಿಕೆ ಉತ್ತೇಜನ ಹಾಗೂ ಕೈಗಾರಿಕಾ ಸಹಭಾಗಿತ್ವ ವಿಸ್ತರಣೆ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ಪ್ರಾದೇಶಿಕ ಸಂಪರ್ಕ, ಸುಸ್ಥಿರ ಬೆಳವಣಿಗೆ ಮತ್ತು ಪರಸ್ಪರ ಸಹಕಾರದ ನೀತಿಗಳನ್ನು ಜಾಗತಿಕ ವೇದಿಕೆಯಲ್ಲಿ ಪ್ರಸ್ತಾಪಿಸಿದ ಕುಮಾರಸ್ವಾಮಿ ಅವರು, ಶಾಂಘೈ ಸಹಕಾರ ಸಂಸ್ಥೆಯ ಚೌಕಟ್ಟಿನೊಳಗೆ ಕೈಗಾರಿಕಾ ಅಭಿವೃದ್ಧಿಯಲ್ಲಿ ಭಾರತ ವಿಶ್ವಾಸಾರ್ಹ ಪಾಲುದಾರ ರಾಷ್ಟ್ರವಾಗಿ ಹೊರಹೊಮ್ಮುತ್ತಿರುವುದನ್ನು ವಿವರಿಸಿದರು.

ಇದಲ್ಲದೆ, ಮಾಜಿ ವಿದೇಶಾಂಗ ಸಚಿವ ಎಸ್.ಎಂ. ಕೃಷ್ಣ ಅವರ ನಂತರ ಶಾಂಘೈ ಸಹಕಾರ ಸಂಸ್ಥೆಯ ಸಚಿವರ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸಿದ ಎರಡನೇ ಕನ್ನಡಿಗ ನಾಯಕ ಎಂಬ ವಿಶೇಷ ಗೌರವಕ್ಕೂ ಎಚ್.ಡಿ. ಕುಮಾರಸ್ವಾಮಿ ಪಾತ್ರರಾದರು.

# 'ರಾಜ್ಯ ಕಾಂಗ್ರೆಸ್ಸಿನಲ್ಲಿ ನಾಲ್ಕು ಪವರ್ ಸೆಂಟರ್'

ಬೆಂಗಳೂರು

ರಾಜ್ಯದಲ್ಲಿ ಭ್ರಷ್ಟಾಚಾರ ರಹಿತ ಆಡಳಿತ ನೀಡಲು ಸಾಧ್ಯವಿಲ್ಲ ಎಂದಾದರೆ ಜಿಬಿಎ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಜೊತೆಗೆ ವಿಧಾನಸಭೆಯನ್ನು ವಿಸರ್ಜನೆ ಮಾಡಿ ಚುನಾವಣೆಯನ್ನು ಎದುರಿಸಲಿ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸವಾಲು ಹಾಕಿದರು.

ನಗರದ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಿಂದ ಮುಖ್ಯಮಂತ್ರಿ ಸ್ಥಾನಕ್ಕಾಗಿ ಕಾಂಗ್ರೆಸ್‌ನಲ್ಲಿ ಹಗ್ಗಜಗ್ಗಾಟ ನಡೆಯುತ್ತಿತ್ತು. ಇದೀಗ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆಗಿ ಪ್ರಮಾಣವಚನ ಸ್ವೀಕರಿಸಿದ 48 ಗಂಟೆಗಳಲ್ಲೇ ಸಚಿವ ರಾಮಲಿಂಗಾ ರೆಡ್ಡಿ ರಾಜೀನಾಮೆ ನೀಡಿರುವುದು ಸರ್ಕಾರದ ಒಳಕಚ್ಚಾಟಕ್ಕೆ ಸಾಕ್ಷಿಯಾಗಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳ ಬಗ್ಗೆ ಗಮನ ಹರಿಸುವ ಬದಲು ಕಾಂಗ್ರೆಸ್ ನಾಯಕರು ಅಧಿಕಾರದ ಪೈಪೋಟಿಯಲ್ಲೇ ನಿರತರಾಗಿದ್ದಾರೆ. ರೈತರು ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ. ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.

ಡಿ.ಕೆ. ಶಿವಕುಮಾರ್, ಬಿ.ಕೆ. ಹರಿಪ್ರಸಾದ್, ಮಲ್ಲಿಕಾರ್ಜುನ ಖರ್ಗೆ ಹಾಗೂ ಸಿದ್ದರಾಮಯ್ಯ ಹೀಗೆ ನಾಲ್ಕು ಪವರ್ ಸೆಂಟರ್‌ಗಳ ನಡುವೆ ಕಾಂಗ್ರೆಸ್ ಸರ್ಕಾರ ಒದ್ದಾಡುತ್ತಿದೆ. ಇದೇ ಮುಂದಿನ ದಿನಗಳಲ್ಲಿ ಸರ್ಕಾರದ ಸ್ಥಿರತೆಗೆ ಧಕ್ಕೆಯಾಗಲಿದೆ ಎಂದು ವಿಜಯೇಂದ್ರ ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಸರ್ಕಾರ ಕಳೆದ ಮೂರು ವರ್ಷಗಳಿಂದ ಜನರ ಹಿತಾಸಕ್ತಿಗಿಂತ ಅಧಿಕಾರ ರಾಜಕಾರಣ ಮತ್ತು ಬೊಕ್ಕಸ ಲೂಟಿಯಲ್ಲೇ ತೊಡಗಿಕೊಂಡಿದೆ. ಇದೀಗ ಅದೇ ರಾಜಕೀಯ ಮುಂದುವರಿಯುತ್ತಿದೆ ಎಂದು ದೂರಿದರು.

# ಆಡಿಯೋ ವೈರಲ್ ಎಫ್‌ಐಆರ್ ದಾಖಲು

ಬೆಂಗಳೂರು

ಮಾಜಿ ಸಚಿವ ಜಮೀರ್ ಅಹಮದ್ ಖಾನ್ ಅವರ ವಿರುದ್ಧ ದ ಷಡ್ಯಂತ್ರದ ಭಾಗವಾಗಿ ಕೆಲವು ಮಾಧ್ಯಮ ಗಳಲ್ಲಿ ಪ್ರಸಾರವಾದ ಆಡಿಯೋ ವೈರಲ್ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಲು ದಾವಣಗೆರೆ ಸೈಬರ್ ಠಾಣೆಯಲ್ಲಿ ಸಿರಾಜ್ ಅವರು ದೂರು ನೀಡಿ ಎಫ್ ಐ ಆರ್ ದಾಖಲಿಸಿದ್ದಾರೆ.

ಮಾಜಿ ಸಚಿವ ಜಮೀರ್ ಅಹಮದ್ ಖಾನ್ ಹಾಗೂ ನನ್ನ ವಿರುದ್ಧ ರಾಜಕೀಯ ಷಡ್ಯಂತ್ರ ಭಾಗವಾಗಿ ಕೆಲವರು ನಕಲಿ ಆಡಿಯೋ ವೈರಲ್ ಮಾಡಿದ್ದು ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಪ್ರಕರಣದ ತನಿಖೆ ಮಾಡಬೇಕು ಎಂದು ದೂರಿನಲ್ಲಿ ತಿಳಿಸಲಾಗಿದೆ.

## “ಈಗ ಹವಾಮಾನಕ್ಕಾಗಿ” ಕ್ರಮಕ್ಕೆ ಪ್ರಧಾನ ವ್ಯವಸ್ಥಾಪಕರ ಕರೆ

ಹುಬ್ಬಳ್ಳಿ

ನೈಋತ್ಯ ರೈಲ್ವೆ ವತಿಯಿಂದ ವಿಶ್ವ ಪರಿಸರ ದಿನ 2026 ಅನ್ನು ವಿವಿಧ ಪರಿಸರ ಜಾಗೃತಿ ಕಾರ್ಯಕ್ರಮಗಳೊಂದಿಗೆ ಆಚರಿಸಲಾಗಿದ್ದು, ಸುಸ್ಥಿರ ಹಾಗೂ ಪರಿಸರ ಸ್ನೇಹಿ ಕಾರ್ಯಾಚರಣೆಗಳತ್ತ ತನ್ನ ಬದ್ಧತೆಯನ್ನು ಪುನರುಚ್ಚರಿಸಲಾಯಿತು.

ಈ ಸಂದರ್ಭದಲ್ಲಿ ನೈಋತ್ಯ ರೈಲ್ವೆಯ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪರಿಸರ ಸಂರಕ್ಷಣೆಯ ಪ್ರತಿಜ್ಞಾವಿಧಿ ಬೋಧಿಸಲಾಯಿತು. ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕರಾದ ಪಿ. ಅನಂತ್ ಅವರು ಮಾತನಾಡಿ, ಈ ವರ್ಷದ “ನಮ್ಮ ಭವಿಷ್ಯಕ್ಕಾಗಿ ಹವಾಮಾನಕ್ಕಾಗಿ ಪ್ರಕೃತಿಯಿಂದ ಪ್ರೇರಿತ” ಎಂಬ ಘೋಷವಾಕ್ಯವು ರೈಲ್ವೆಗೆ ವಿಶೇಷ ಮಹತ್ವ ಹೊಂದಿದೆ ಎಂದು ತಿಳಿಸಿದರು.

ರೈಲ್ವೆ ಸಿಬ್ಬಂದಿ ಕೇವಲ ಮೂಲಸೌಕರ್ಯಗಳನ್ನು ನಿರ್ವಹಿಸುವವರಲ್ಲ, ದೇಶದ ಅತ್ಯಂತ ಪರಿಸರ ಸ್ನೇಹಿ ಸಾರಿಗೆ ವ್ಯವಸ್ಥೆಯ ಪಾಲಕರಾಗಿದ್ದಾರೆ ಎಂದು ಅವರು ಅಭಿಪ್ರಾಯಪಟ್ಟರು. ರೈಲ್ವೆ ಸಿಬ್ಬಂದಿಯ ಪ್ರತಿಯೊಂದು ದೈನಂದಿನ ನಿರ್ಧಾರವೂ ದೇಶದ ಆರ್ಥಿಕ ಅಭಿವೃದ್ಧಿ ಹಾಗೂ ಪರಿಸರ ಸಮತೋಲನದ ಮೇಲೆ ಮಹತ್ವದ ಪರಿಣಾಮ ಬೀರುತ್ತದೆ ಎಂದು ಹೇಳಿದರು.

ಪ್ರಕೃತಿಯಿಂದ ಸ್ಫೂರ್ತಿ ಪಡೆದು ರೈಲ್ವೆ ಕಾರ್ಯಾಚರಣೆಯಲ್ಲಿ ದಕ್ಷತೆ, ಸಮನ್ವಯ ಹಾಗೂ ಸ್ಥಿರತೆಯನ್ನು ಹೆಚ್ಚಿಸಬೇಕೆಂದು ಕರೆ ನೀಡಿದ ಅವರು, ನೈಋತ್ಯ ರೈಲ್ವೆ ಕೈಗೊಂಡಿರುವ ವಿವಿಧ ಪರಿಸರ ಸ್ನೇಹಿ ಕ್ರಮಗಳನ್ನು ವಿವರಿಸಿದರು.

ಹಸಿರು ಮೂಲಸೌಕರ್ಯ ಅಭಿವೃದ್ಧಿ, ಸಂಪೂರ್ಣ ವಿದ್ಯುದೀಕರಣ, ಪ್ರಮುಖ ನಿಲ್ದಾಣಗಳಲ್ಲಿ ಸೌರಶಕ್ತಿ ಅಳವಡಿಕೆ, ಕಬ್ಬಿಣ, ಸಿಮೆಂಟ್ ಹಾಗೂ ಉಕ್ಕು ಸೇರಿದಂತೆ ಭಾರೀ ಸರಕು ಸಾಗಣೆಯನ್ನು ರಸ್ತೆಗಳಿಂದ ರೈಲಿಗೆ ವರ್ಗಾಯಿಸುವ ಮೂಲಕ ಮಾಲಿನ್ಯ ನಿಯಂತ್ರಣದ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜೊತೆಗೆ ಶೂನ್ಯ ತ್ಯಾಜ್ಯ ಅಭಿಯಾನ, ನೀರಿನ ಮರುಬಳಕೆ, ಪರಿಸರ ಸ್ನೇಹಿ ತ್ಯಾಜ್ಯ ನಿರ್ವಹಣೆ, ಇಂಧನ ಸಂರಕ್ಷಣೆ, ಅರಣ್ಯೀಕರಣ, ಏಕಬಳಕೆಯ ಪ್ಲಾಸ್ಟಿಕ್ ನಿಷೇಧ ಹಾಗೂ ಕಸದ ತಡೆ ಅಭಿಯಾನಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುತ್ತಿದೆ ಎಂದರು. ರೈಲ್ವೆ ಕಟ್ಟಡಗಳಲ್ಲಿ ಎಲ್ಇಡಿ ದೀಪಗಳು, ಶಕ್ತಿಸೇವಕ ಪಂಖಾಗಳು ಹಾಗೂ ಇಂಧನ-ಕ್ಷಮ ಸಾಧನಗಳ ಬಳಕೆಯನ್ನು ಹೆಚ್ಚಿಸಲಾಗಿದೆ ಎಂದು ಹೇಳಿದರು.

ಸುಸ್ಥಿರತೆ ಒಂದು ದಿನದ ಆಚರಣೆಗೆ ಸೀಮಿತವಲ್ಲ. ಅದು ಪ್ರತಿದಿನದ ಕಾರ್ಯಾಚರಣೆ, ನಿರ್ವಹಣೆ ಹಾಗೂ ಯೋಜನೆಗಳಲ್ಲಿ ಅಳವಡಿಸಬೇಕಾದ ಮೌಲ್ಯ ಎಂದು ಅವರು ಪುನರುಚ್ಚರಿಸಿದರು. ವೇಗವಾದ, ಸ್ವಚ್ಛ ಹಾಗೂ ಸ್ಮಾರ್ಟ್ ರೈಲು ಸೇವೆಗಳನ್ನು ಒದಗಿಸುವ ಮೂಲಕ ಭವಿಷ್ಯದ ಪೀಳಿಗೆಗಾಗಿ ಪರಿಸರವನ್ನು ಸಂರಕ್ಷಿಸಬೇಕೆಂದು ಸಿಬ್ಬಂದಿಗೆ ಮನವಿ ಮಾಡಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ನೈಋತ್ಯ ರೈಲ್ವೆ ವ್ಯಾಪ್ತಿಯಲ್ಲಿ ಒಟ್ಟು 750 ಸಸಿಗಳನ್ನು ನೆಡಲಾಯಿತು. ಕಾರ್ಯಕ್ರಮದಲ್ಲಿ ಹೆಚ್ಚುವರಿ ಪ್ರಧಾನ ವ್ಯವಸ್ಥಾಪಕರಾದ ಶ್ರೀ ರಾಮ ಮೋಹನ ರೆಡ್ಡಿ, ಮುಖ್ಯ ಮೆಕ್ಯಾನಿಕಲ್ ಎಂಜಿನಿಯರ್ (ಪರಿಸರ) ಶ್ರೀ ಕೃಷ್ಣರಾಜ್ ಕೆ.ಕೆ. ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

ಹುಬ್ಬಳ್ಳಿ, ಬೆಂಗಳೂರು ಮತ್ತು ಮೈಸೂರು ವಿಭಾಗಗಳಾದ್ಯಂತ ವಿಶ್ವ ಪರಿಸರ ದಿನವನ್ನು ವಿವಿಧ ಜಾಗೃತಿ ಕಾರ್ಯಕ್ರಮಗಳು, ಸಸಿ ನೆಡುವಿಕೆ ಮತ್ತು ಸ್ವಚ್ಛತಾ ಅಭಿಯಾನಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

## ನಾಗರಭಾವಿ ಮುಖ್ಯರಸ್ತೆಯ ವೈಟ್‌ಟಾಪಿಂಗ್ ಶೀಘ್ರ ಪೂರ್ಣಗೊಳಿಸಲು ನಿರ್ದೇಶನ



ಬೆಂಗಳೂರು

ಗಾಳಿ ಆಂಜನೇಯ ದೇವಸ್ಥಾನದ ಬಳಿ ವೃಷಭಾವತಿ ವ್ಯಾಲಿಯಲ್ಲಿ ಹಾದು ಹೋಗುತ್ತಿರುವ 66 ಕೆ.ವಿ. ಸಾಮರ್ಥ್ಯದ ಬೆಸ್ಕಾಂ ವಿದ್ಯುತ್ ಲೈನ್ ಅನ್ನು ಮೇಲ್ಭಾಗಕ್ಕೆ ಸ್ಥಳಾಂತರಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಬೆಸ್ಕಾಂ ಅಧಿಕಾರಿಗಳಿಗೆ ದೂರವಾಣಿ ಮೂಲಕ ಸೂಚನೆ ನೀಡಿದರು.

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ವೃಷಭಾವತಿ ವ್ಯಾಲಿಯಲ್ಲಿ ವಿದ್ಯುತ್ ಲೈನ್ ಅಡ್ಡಲಾಗಿರುವುದರಿಂದ ಮಳೆನೀರಿನ ಹರಿವು ಹೆಚ್ಚಾದ ಸಂದರ್ಭದಲ್ಲಿ ತ್ಯಾಜ್ಯ ಸಂಗ್ರಹವಾಗಿ ನೀರು ಹಿಮ್ಮುಖವಾಗಿ ಹರಿಯುವ ಸಾಧ್ಯತೆ ಹೆಚ್ಚಿದೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ತಕ್ಷಣ ಕ್ರಮ ಕೈಗೊಂಡು ವಿದ್ಯುತ್ ಲೈನ್ ಅನ್ನು ಮೇಲ್ಭಾಗಕ್ಕೆ ಸ್ಥಳಾಂತರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ರಸ್ತೆ ಜಲಾವೃತವಾಗುವುದನ್ನು ತಪ್ಪಿಸಲು ತಾತ್ಕಾಲಿಕ ಕ್ಯಾಚ್‌ಮೆಂಟ್ ಪಿಟ್ ನಿರ್ಮಿಸಿ ಪಂಪ್ ವ್ಯವಸ್ಥೆ ಕಲ್ಪಿಸಬೇಕು. ಮಳೆಗಾಲದಲ್ಲಿ ಪಂಪ್ ಮೂಲಕ ನೀರನ್ನು ವ್ಯಾಲಿಗೆ ಹರಿಸುವ ವ್ಯವಸ್ಥೆ ಮಾಡಿ ರಸ್ತೆ ಮೇಲೆ ನೀರು ನಿಲ್ಲದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಮೇಲ್ಸೇತುವೆ ರಸ್ತೆಗೆ ಈಗಾಗಲೇ ಡಾಂಬರೀಕರಣ ಕಾರ್ಯ ಪೂರ್ಣಗೊಂಡಿದ್ದು, ಎಸ್‌ಐಪಿ ಅನುದಾನದಡಿ ಕೈಗೆತ್ತಿಕೊಳ್ಳಲಾಗಿರುವ ರಸ್ತೆ ಅಭಿವೃದ್ಧಿ ಹಾಗೂ ಡಾಂಬರೀಕರಣ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗೋವಿಂದರಾಜನಗರ ವಿಭಾಗದ ವಿಜಯನಗರ ಟೆಲಿಫೋನ್ ಎಕ್ಸ್‌ಚೇಂಜ್‌ನಿಂದ ಶೋಭ ಆಸ್ಪತ್ರೆ ಹಾಗೂ ಮೂಡಲಪಾಳ್ಯ ಮಾರ್ಗವಾಗಿ ನಾಗರಭಾವಿ ವೃತ್ತದವರೆಗೆ 3.8 ಕಿಲೋಮೀಟರ್ ಉದ್ದದ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ರಸ್ತೆ ಕಿರಿದಾಗಿರುವ ಕಾರಣ ವಾಹನ ಸಂಚಾರವನ್ನು ಹಂತ ಹಂತವಾಗಿ ನಿರ್ಬಂಧಿಸಿ ಕಾಮಗಾರಿ ನಡೆಸಲಾಗುತ್ತಿದೆ.

ಮೊದಲ ಹಂತದಲ್ಲಿ 250 ಮೀಟರ್ ರಸ್ತೆ ಕಾಮಗಾರಿ ಪ್ರಾರಂಭವಾಗಿದ್ದು, ಅದನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

## ಮೈಸೂರಿನಲ್ಲಿ ನಾಟಕೋತ್ಸವ-2026: ‘ಸಂಪೂರ್ಣ ರಾಮಾಯಣ’, ‘ಕುರುಕ್ಷೇತ್ರ’ ಸೇರಿದಂತೆ ಹಲವು ನಾಟಕಗಳ ಪ್ರದರ್ಶನ



ಮೈಸೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಸಹಯೋಗದೊಂದಿಗೆ ವಿಜಯನಗರದ ಓಂ ಶ್ರೀ ಸಾಯಿರಾಂ ಸಾಂಸ್ಕೃತಿಕ ಕಲಾ ವೇದಿಕೆ (ರಿ.) ವತಿಯಿಂದ ಆಯೋಜಿಸಲಾಗುತ್ತಿರುವ ನಾಟಕೋತ್ಸವ-2026**ರ ಕುರಿತು ನಗರದ ಟೌನ್ ಹಾಲ್‌ನಲ್ಲಿ ಪತ್ರಿಕಾಗೋಷ್ಠಿ ನಡೆಯಿತು ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮೈಸೂರು ಮಂಜುಳಾ ತಿಳಿಸಿದರು.


ಜೂನ್ 5, 6 ಮತ್ತು 7ರಂದು ನಡೆಯಲಿರುವ ನಾಟಕೋತ್ಸವದಲ್ಲಿ **‘ಸಂಪೂರ್ಣ ರಾಮಾಯಣ’, ‘ಕುರುಕ್ಷೇತ್ರ’ ಹಾಗೂ ‘ನನ್ನ ಗಂಡ ಬಲು ಬಂಡ’** ಸೇರಿದಂತೆ ವಿವಿಧ ನಾಟಕಗಳ ಪ್ರದರ್ಶನ ಏರ್ಪಡಿಸಲಾಗಿದೆ. ಕನ್ನಡ ರಂಗಭೂಮಿ, ಕಲೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಉತ್ತೇಜನ ನೀಡುವ ಉದ್ದೇಶದಿಂದ ಈ ಉತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ನಾಟಕೋತ್ಸವದ ಅಂಗವಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಕಲಾವಿದರ ಸನ್ಮಾನ ಹಾಗೂ ರಂಗಭೂಮಿಯ ಬೆಳವಣಿಗೆಗೆ ಸಂಬಂಧಿಸಿದ ವಿಚಾರ ಸಂಕಿರಣಗಳು ನಡೆಯಲಿವೆ. ಕಾರ್ಯಕ್ರಮದಲ್ಲಿ ಕನ್ನಡ ರಂಗಭೂಮಿಯ ಶ್ರೀಮಂತ ಪರಂಪರೆ ಹಾಗೂ ಸಮಕಾಲೀನ ನಾಟಕಗಳ ಮಹತ್ವವನ್ನು ಪರಿಚಯಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ವಹಿಸಲಿದ್ದು, ಮೈಸೂರು ಕೆ.ಆರ್. ಆಸ್ಪತ್ರೆಯ ಅಧೀಕ್ಷಕಿ ಡಾ. ಶೋಭಾ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಡಾ. ರೇಖಾ ಅರುಣ್ ಭಾಗವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಡಾ. ನಾಗರಾಜ್, ಗೋಲ್ಡನ್ ಸುರೇಶ್, ನಟ ಹಾಗೂ ನಿರ್ಮಾಪಕ ಮಹೇಂದ್ರ ಮನೋತ್, ಹಿರಿಯ ಪತ್ರಕರ್ತ ಗಂಡಸಿ ಸದಾನಂದಸ್ವಾಮಿ, ಮಧು ಎಂ.ಪಿ., ಎಚ್. ಗುರುಸ್ವಾಮಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿರಲಿದ್ದಾರೆ.

ಕನ್ನಡ ನಾಟಕ ರಂಗದ ಅಭಿವೃದ್ಧಿ ಮತ್ತು ಯುವ ಕಲಾವಿದರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಆಯೋಜಿಸಿರುವ ಈ ನಾಟಕೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಲಾಭಿಮಾನಿಗಳು, ರಂಗಕರ್ಮಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಭಾಗವಹಿಸುವಂತೆ ಮೈಸೂರು ಮಂಜುಳಾ ಮನವಿ ಮಾಡಿದ್ದಾರೆ.



ರಂದು ಪುಸ್ತಕ ಬಿಡುಗಡೆ ಬೆಂಗಳೂರಿನ ನಯನ ಸಭಾಂಗಣದಲ್ಲಿ ಬಿಡುಗಡೆ ಮಾಡಲಾಯಿತು. ಈ ಯೋಜನೆ ಅಡಿ ಹಿರಿಯ ಪತ್ರಕರ್ತ ಕೆ. ಶಾಂತಕುಮಾರಿ ಬರೆದ ’ ಕಮಲಾದೇವಿ ಚಟ್ಟೋಪಾಧ್ಯಾಯ " ಪುಸ್ತಕವು ಬಿಡುಗಡೆಯಾಯಿತು. ಹಿರಿಯ ಪತ್ರಕರ್ತರು ಬೆಂಗಳೂರಿನ ಪ್ರೆಸ್ ಕ್ಲಬ್ ನಲ್ಲಿ ಪ್ರೋತ್ಸಾಹಿಸಲು ಮತ್ತೊಮ್ಮೆ ಬಿಡುಗಡೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಹಾಗೂ ಮಾಜಿ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಎಂ. ಪೊನ್ನಪ್ಪ, ಜಗದೀಶ್, ಶ್ರೀಮತಿ ಅಂಬಿಕಾ, ಫೋಟೋಗ್ರಾಫರ್ ಜಗದೀಶ್, ಪುಸ್ತಕದ ಬರಹಗಾರ್ತಿ ಕೆ. ಶಾಂತಕುಮಾರಿ, ಜುಲ್ಫಿ ಕಾರ್ ಅಹಮದ್, ಗಂಡಸಿ ಸದಾನಂದ ಸ್ವಾಮಿ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸಿದ್ದರು.

## ಕನ್ನಡ ಚಿತ್ರರಂಗದ ಹಿರಿಯ ಹಾಸ್ಯ ಕಲಾವಿದ ಡಿಂಗ್ರಿ ನಾಗರಾಜ್ ಜನ್ಮದಿನ ಸಂಭ್ರಮ

ಬೆಂಗಳೂರು: ಕನ್ನಡ ಚಿತ್ರರಂಗದ ಹಿರಿಯ ಹಾಸ್ಯ ಕಲಾವಿದ, ರಂಗಕರ್ಮಿ ಹಾಗೂ ಡಿಂಗ್ರಿ ನಾಗರಾಜ್ ಅವರ ಜನ್ಮದಿನವನ್ನು ಆಡುಗೋಡಿಯ ಮಹಾಲಿಂಗೇಶ್ವರ ದೇವಸ್ಥಾನದಲ್ಲಿ ಚಿತ್ರರಂಗದ ಕಲಾಭಿಮಾನಿಗಳು, ಸ್ನೇಹಿತರು ಹಾಗೂ ಹಿತೈಷಿಗಳು ಅದ್ದೂರಿಯಾಗಿ ಆಚರಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅರ್ಚನೆ ನೆರವೇರಿಸಿ ಡಿಂಗ್ರಿ ನಾಗರಾಜ್ ಅವರ ಆರೋಗ್ಯ, ಆಯುಷ್ಯ ಹಾಗೂ ಇನ್ನಷ್ಟು ಕಲಾಸೇವೆಗೆ ಶುಭ ಹಾರೈಸಲಾಯಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಟ ನಿರ್ಮಾಪಕ ಗಂಡಸಿ ಸದಾನಂದ ಸ್ವಾಮಿ, ಎಸ್ಕಾರ್ಟ್ ಶ್ರೀನಿವಾಸ್, ಶಿವಮೊಗ್ಗ ಭಾಸ್ಕರ್, ಆಡುಗೋಡಿ ಶ್ರೀನಿವಾಸ್, ಕಲಾವಿದರಾದ ಜೂನಿಯರ್ ಜಗ್ಗಿ ಬಸವರಾಜು, ಸುಧಾ, ಭೂಮಿ ಪ್ರಿಯ, ಆಡುಗೋಡಿ ರಾಜು, ದಾಸೇಗೌಡ , ಸೇರಿದಂತೆ ಅನೇಕ ಅಭಿಮಾನಿಗಳು



ಕೇಕ್ ಕತ್ತರಿಸಿ, ಪುಷ್ಪಗುಚ್ಛಗಳನ್ನು ನೀಡಿ ಜನ್ಮದಿನದ ಶುಭಾಶಯಗಳನ್ನು ಸಲ್ಲಿಸಿದರು.

ರಂಗಭೂಮಿ ಮತ್ತು ಚಲನಚಿತ್ರ ಕ್ಷೇತ್ರದಲ್ಲಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸಿರುವ ಡಿಂಗ್ರಿ ನಾಗರಾಜ್ ಅವರು 10 ಸಾವಿರಕ್ಕೂ ಹೆಚ್ಚು ನಾಟಕಗಳಲ್ಲಿ ಹಾಗೂ 800ಕ್ಕೂ ಹೆಚ್ಚು ಕನ್ನಡ ಚಲನಚಿತ್ರಗಳು ಮತ್ತು ಹಲವಾರು ಧಾರಾವಾಹಿಗಳಲ್ಲಿ ಅಭಿನಯಿಸಿ ಕನ್ನಡಿಗರ ಮನೆಮಾತಾಗಿದ್ದಾರೆ. ತಮ್ಮ ವಿಶಿಷ್ಟ ಹಾಸ್ಯ ಶೈಲಿ, ಸರಳ ವ್ಯಕ್ತಿತ್ವ ಮತ್ತು ಅದ್ಭುತ ನಟನೆಯ ಮೂಲಕ ಅಪಾರ ಅಭಿಮಾನಿಗಳನ್ನು ಗಳಿಸಿದ್ದಾರೆ.

ಕೇವಲ ನಟನೆಯಲ್ಲಿ ಮಾತ್ರವಲ್ಲದೆ, ಕಲಾವಿದರ ಹಿತಾಸಕ್ತಿಗಾಗಿ ಕೂಡ ಅವರು ನಿರಂತರವಾಗಿ ಶ್ರಮಿಸುತ್ತಿದ್ದು, ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘದ ಅಧ್ಯಕ್ಷರಾಗಿ ಅನೇಕ ಕಲಾವಿದರ ಸಮಸ್ಯೆಗಳಿಗೆ ಸ್ಪಂದಿಸಿ ಉತ್ತಮ ಸೇವೆ ಸಲ್ಲಿಸಿದ್ದಾರೆ. ಅವರ ಸಾಮಾಜಿಕ ಕಾಳಜಿ ಹಾಗೂ ಕಲಾವಿದರ ಪರ ಹೋರಾಟಗಳು ಚಿತ್ರರಂಗದಲ್ಲಿ ವಿಶೇಷ ಗೌರವವನ್ನು ತಂದಿವೆ.

ಡಿಂಗ್ರಿ ನಾಗರಾಜ್ ಅವರ ಕಲಾಸಾಧನೆಗೆ ರಾಜ್ಯ ಪ್ರಶಸ್ತಿ ಸೇರಿದಂತೆ ಅನೇಕ ಸಂಘ-ಸಂಸ್ಥೆಗಳು ಸಾವಿರಾರು ಪ್ರಶಸ್ತಿಗಳು ಮತ್ತು ಸನ್ಮಾನಗಳನ್ನು ನೀಡಿ ಗೌರವಿಸಿವೆ. ಕನ್ನಡ ರಂಗಭೂಮಿ ಮತ್ತು ಚಲನಚಿತ್ರ ಕ್ಷೇತ್ರಕ್ಕೆ ಅವರು ನೀಡಿರುವ ಕೊಡುಗೆ ಅಪಾರವಾಗಿದ್ದು, ಯುವ ಕಲಾವಿದರಿಗೆ ಪ್ರೇರಣೆಯಾಗಿ ನಿಂತಿದ್ದಾರೆ.

ಜನ್ಮದಿನದ ಸಂಭ್ರಮದಲ್ಲಿ ಭಾಗವಹಿಸಿದ್ದ ಸ್ನೇಹಿತರು ಹಾಗೂ ಅಭಿಮಾನಿಗಳು, ಡಿಂಗ್ರಿ ನಾಗರಾಜ್ ಅವರು ಇನ್ನೂ ಹಲವು ವರ್ಷಗಳ ಕಾಲ ಉತ್ತಮ ಆರೋಗ್ಯದೊಂದಿಗೆ ಕನ್ನಡ ಕಲೆ ಮತ್ತು ಸಂಸ್ಕೃತಿಗೆ ಸೇವೆ ಸಲ್ಲಿಸಲಿ ಎಂದು ಹಾರೈಸಿದರು.

## ‘ಸಾಧಕರೊಂದಿಗೆ ಸಂವಾದ’

ತುಮಕೂರು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ವಿಭಾಗದ ವತಿಯಿಂದ ಜೂನ್ 16ರಂದು ಸಂಜೆ 4.30 ಗಂಟೆಗೆ ನಗರದ ಕನ್ನಡ ಭವನದಲ್ಲಿ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ವೃತ್ತಿ ರಂಗಭೂಮಿಯ ಹಿರಿಯ ಕಲಾವಿದರು, ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಅಭಿಜಾತ ಕಲಾವಿದರು ಆದ ಶ್ರೀ ಚನ್ನಬಸಯ್ಯಗುಬ್ಬಿ ಇವರು 103 ವರ್ಷಗಳ ತುಂಬು ಜೀವನವನ್ನು ರಂಗಭೂಮಿಗಾಗಿ ಮುಡಿಪಿಟ್ಟ ಹಿರಿಯ ಚೇತನರಾಗಿದ್ದು, ಯುವ ಕಲಾವಿದರಿಗೆ ಮಾರ್ಗದರ್ಶನ ನೀಡುತ್ತಾ ಸ್ಫೂರ್ತಿಯಾಗಿ ನಿಂತಿದ್ದಾರೆ. ಇವರು ರಂಗಭೂಮಿಗೆ ಹಾಗೂ ಸಮಾಜಕ್ಕೆ ನೀಡಿದ ಕೊಡುಗೆಗಳ ಕುರಿತು ಸಾರ್ವಜನಿಕರೊಂದಿಗೆ ಸಂವಾದ ನಡೆಸಲು ಈ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಕಲಾವಿದರು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ ಕೆ.ಮಿರ್ಜಿ ಮನವಿ ಮಾಡಿದ್ದಾರೆ.

## ಸಣ್ಣ ಉದ್ದಿಮೆದಾರರ ರಕ್ಷಣೆಗೆ ಸಮಗ್ರ ನೀತಿ ಜಾರಿಗೊಳಿಸಲು ರವಿಶೆಟ್ಟಿ ಬೈಂದೂರ್ ಆಗ್ರಹ

ಬೆಂಗಳೂರು

ರಾಜ್ಯದ ಸಣ್ಣ ಉದ್ದಿಮೆದಾರರು, ಬೇಕರಿ, ಕಾಂಡಿಮೆಂಟ್ಸ್, ಬೀಡಾ ಅಂಗಡಿ, ಸ್ಟ್ರೀಟ್ ಫುಡ್, ಹಣ್ಣು-ತರಕಾರಿ ಮಾರಾಟಗಾರರು ಹಾಗೂ ಬೀದಿಬದಿ ವ್ಯಾಪಾರಿಗಳು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸಣ್ಣ ಉದ್ದಿಮೆದಾರರ ಪ್ರಮುಖ ಸಂಘಟನೆ ಕಾರ್ಮಿಕರ ಪರಿಷತ್ ಜೂನ್ 18ರಂದು ಮುಷ್ಕರಕ್ಕೆ ಕರೆ ನೀಡಿದೆ




ಅಧಿಕಾರಿಗಳ ಕಿರುಕುಳ, ಅನಗತ್ಯ ದಂಡ, ಲಂಚದ ಬೇಡಿಕೆ, ಅಂಗಡಿಗಳ ಮುಚ್ಚುವಿಕೆ, ಪೊಲೀಸ್ ಠಾಣೆಗಳಿಗೆ ಅನಗತ್ಯವಾಗಿ ಕರೆಯಿಸುವುದು, ವ್ಯಾಪಾರಕ್ಕೆ ಅಡ್ಡಿಪಡಿಸುವುದು ಹಾಗೂ ಸಣ್ಣ ವ್ಯಾಪಾರಿಗಳನ್ನು ಅಪರಾಧಿಗಳಂತೆ ನಡೆಸಿಕೊಳ್ಳುವ ಪ್ರವೃತ್ತಿ ನಿಲ್ಲಬೇಕು ಎಂದು ಆಗ್ರಹಿಸಲಾಗಿದೆ.

ಸರ್ಕಾರ ಸಣ್ಣ ಉದ್ದಿಮೆದಾರರ ಹಿತಾಸಕ್ತಿ ಕಾಪಾಡಲು ಪ್ರತ್ಯೇಕ ಪ್ರಾಧಿಕಾರ ರಚಿಸಬೇಕು, ಒಂದು ಅಂಗಡಿಯ ವ್ಯಾಪಾರಕ್ಕೆ ಒಂದೇ ಪರವಾನಗಿ ವ್ಯವಸ್ಥೆ ಜಾರಿಗೊಳಿಸಬೇಕು, ವ್ಯಾಪಾರ ನಡೆಸಲು ನಿಗದಿತ ಸಮಯ ನೀಡಬೇಕು ಹಾಗೂ ಯಾವುದೇ ಇಲಾಖೆಯ ಅಧಿಕಾರಿಗಳು ಅನಗತ್ಯ ಕಿರುಕುಳ ನೀಡದಂತೆ ಕಟ್ಟುನಿಟ್ಟಿನ ನಿಯಮ ಜಾರಿಗೆ ತರಬೇಕು ಎಂದು ಮನವಿ ಮಾಡಲಾಗಿದೆ. ಅಲ್ಲದೆ, ತಂಬಾಕು ಉತ್ಪನ್ನಗಳ ಕುರಿತು ಸ್ಪಷ್ಟ ನೀತಿ ರೂಪಿಸುವುದು, ತಂಬಾಕು ಉತ್ಪನ್ನಗಳನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಇಲ್ಲದಿದ್ದಲ್ಲಿ ಮುಕ್ತ ಮಾರಾಟಕ್ಕೆ ಅವಕಾಶವನ್ನು ನೀಡಬೇಕು ಸಣ್ಣ ಉದ್ದಿಮೆದಾರರಿಗೆ ಕಿರುಕುಳ ನೀಡಬಾರದು ಎಂಬುದರೊಂದಿಗೆ ತಂಬಾಕು ಉತ್ಪನ್ನಗಳನ್ನು ಬೆಲೆ ಏರಿಕೆ ಹೆಸರಿನಲ್ಲಿ ಕೃತಕ ಅಭಾವ ಸೃಷ್ಟಿಸಿ ಬೆಲೆ ಏರಿಕೆ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವುದು, ಸಣ್ಣ ವ್ಯಾಪಾರಿಗಳ ಸುರಕ್ಷತೆ ಹಾಗೂ ಹಕ್ಕುಗಳನ್ನು ಕಾಪಾಡುವ ಕಾನೂನು ರಕ್ಷಣೆ ಒದಗಿಸುವಂತೆ ಸರ್ಕಾರವನ್ನು ಒತ್ತಾಯಿಸಲಾಗಿದೆ. ಸಣ್ಣ ಉದ್ದಿಮೆದಾರರು ರಾಜ್ಯದ ಆರ್ಥಿಕತೆ, ಉದ್ಯೋಗ ಸೃಷ್ಟಿ ಹಾಗೂ ತೆರಿಗೆ ಸಂಗ್ರಹಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ಅವರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ಪರಿಗಣಿಸಿ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಪ್ರಕಟಣೆಯಲ್ಲಿ ಕಾರ್ಮಿಕರ ಪರಿಷತ್ ತಿಳಿಸಿದೆ

## ಇಬ್ಬರು ಕಾರ್ಮಿಕರ ಸಾವು

ಬೆಂಗಳೂರು

ಸ್ವಚ್ಛಗೊಳಿಸಲು ಕೆಮಿಕಲ್ ಯುಕ್ತ ಬಾಯ್ಲರ್ ಒಳಗಿಳಿದ ಇಬ್ಬರು ಕಾರ್ಮಿಕರು ಡ್ರೈನೇಜ್‌ಗೆ ಬಿದ್ದು ಮೃತಪಟ್ಟು,ಮತ್ತಿಬ್ಬರ ಸ್ಥಿತಿ ಗಂಭೀರವಾಗಿರುವ ದಾರುಣ ಘಟನೆ ತಾಲೂಕಿನ ಜಿಗಣಿ ಕೈಗಾರಿಕಾ ಪ್ರದೇಶದಲ್ಲಿ ನಡೆದಿದೆ.

ಉತ್ತರ ಪ್ರದೇಶ ಮೂಲದ ಮುನ್ನಾ ಸಿಂಗ್ (45) ಹಾಗೂ ಲಾಲು ಸಿಂಗ್ (40) ಮೃತ ಕಾರ್ಮಿಕರು. ಜಿಗಣಿ ಕೈಗಾರಿಕಾ ಪ್ರದೇಶದ ಕುಮಾರ್ ಆರ್ಗ್ಯಾನಿಕ್ಸ್ ಕಾರ್ಖಾನೆಯಲ್ಲಿ ಸಂಜೆ ಕತ್ತಲಿನಲ್ಲಿ ಕೆಮಿಕಲ್ ಯುಕ್ತ ಬಾಯ್ಲರ್ ಸ್ವಚ್ಛಗೊಳಿಸಲು ಇಳಿದಾಗ ಈ ಘಟನೆ ಸಂಭವಿಸಿದೆ.

ಮೃತರು ಅಂಗಿ ಕಳಚಿ ಸ್ವಚ್ಛತೆಗೆ ಇಳಿದಿದ್ದರು. ಸುಮಿತ್ ಮಂಡಲ್ ಮತ್ತು ವಿಜಯ್ ಕುಮಾರ್ ಸಿಂಗ್ ಎಂಬ ಕಾರ್ಮಿಕರ ಸ್ಥಿತಿ ಗಂಭೀರಗಾಗಿದ್ದು, ಅವರನ್ನು ಸ್ಥಳೀಯ ಖಾಸಗಿ ಆಸ್ಪತ್ತೆಗೆ ದಾಖಲು ಮಾಡಲಾಗಿದೆ.

## ಕಾಂಕ್ರೀಟ್ ಕಾಡಿನ ಮಧ್ಯೆ ಪ್ರಕೃತಿಯ ಸಮತೋಲನಕ್ಕೆ ಗಿಡ-ಮರಗಳ ಪೋಷಣೆ ಅತ್ಯಗತ್ಯ

ಚಿಂತಾಮಣಿ

ಆಧುನಿಕ ಜಗತ್ತಿನ ಕಾಂಕ್ರೀಟ್ ಕಾಡಿನ ಮಧ್ಯೆ ಪ್ರಕೃತಿಯ ಸಮತೋಲನವನ್ನು ಕಾಯ್ದುಕೊಳ್ಳಲು ಹಾಗೂ ಮಾನವನ ಉಸಿರಾಟಕ್ಕೆ ಅಗತ್ಯವಿರುವ ಶುದ್ಧ ವಾತಾವರಣ ನಿರ್ಮಾಣಕ್ಕೆ ಗಿಡ-ಮರಗಳ ಬೆಳೆಸುವಿಕೆ ಮತ್ತು ಪರಿಸರ ಸಂರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ ಎಂದು ಚಿಕ್ಕಬಳ್ಳಾಪುರದ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕಾಂತರಾಜು ಎಸ್.ವಿ ಅಭಿಪ್ರಾಯಪಟ್ಟರು.

ನಗರದ ಪ್ರಕೃತಿ ರಮಣೀಯ ತಾಣವಾದ ಕಾಡುಮಲ್ಲೇಶ್ವರ ಬೆಟ್ಟದ ಟ್ರೀ ಪಾರ್ಕ್‌ನಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ತಾಲ್ಲೂಕು ಆಡಳಿತ, ವಕೀಲರ ಸಂಘ, ಅರಣ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಹಸಿರು ಆಂದೋಲನ ಕಾರ್ಯಕ್ರಮಕ್ಕೆ ಗಿಡ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಕೃತಿಯ ಮೂಲ ಘಟಕಗಳಾದ ಮಣ್ಣು, ಗಾಳಿ ಮತ್ತು ನೀರು ಕಲುಷಿತಗೊಳ್ಳುತ್ತಿರುವುದೇ ಜಾಗತಿಕ ತಾಪಮಾನ ಏರಿಕೆಗೆ ಪ್ರಮುಖ ಕಾರಣವಾಗಿದೆ. ಇದನ್ನು ತಡೆಗಟ್ಟಿ ನೈಸರ್ಗಿಕ



ಸಮತೋಲನವನ್ನು ಮರುಸ್ಥಾಪಿಸಬೇಕಾದರೆ ವ್ಯಾಪಕವಾಗಿ ಗಿಡಮರಗಳನ್ನು ಬೆಳೆಸಬೇಕು. ಸಸ್ಯರಾಶಿಗಳು ಹೆಚ್ಚಾದಾಗ ಮಾತ್ರ ಶುದ್ಧ ಗಾಳಿ ಮತ್ತು ಉತ್ತಮ ಪರಿಸರ ಲಭ್ಯವಾಗುತ್ತದೆ ಎಂದು ಹೇಳಿದರು.

ಪ್ರತಿ ವರ್ಷ ಪರಿಸರ ದಿನಾಚರಣೆಯ ಅಂಗವಾಗಿ ಗಿಡಗಳನ್ನು ನೆಟ್ಟು ಜಾಗೃತಿ ಮೂಡಿಸುವುದು ಕೇವಲ ಸಾಂಕೇತಿಕ ಆಚರಣೆಯಾಗಬಾರದು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಆಡಳಿತಾತ್ಮಕ ನ್ಯಾಯಾಧೀಶ ಹಂಚಾಟೆ ಸಂಜೀವ್ ಕುಮಾರ್ ಸೂಚನೆ ನೀಡಿದ್ದಾರೆ. ಗಿಡಗಳನ್ನು ನೆಟ್ಟ ನಂತರ ಅವುಗಳನ್ನು ಹೆಮ್ಮರವಾಗಿ ಬೆಳೆಸುವವರೆಗೂ ನಿರಂತರವಾಗಿ ಪೋಷಿಸಿ ಸಂರಕ್ಷಿಸುವ ಜವಾಬ್ದಾರಿಯನ್ನು ಪ್ರತಿಯೊಬ್ಬರೂ ಹೊತ್ತುಕೊಳ್ಳಬೇಕು ಎಂದರು.

ಜಿಲ್ಲೆಯಾದ್ಯಂತ ಪ್ರಸಕ್ತ ಸಾಲಿನಲ್ಲಿ 5 ಲಕ್ಷ ಗಿಡಗಳನ್ನು ನೆಟ್ಟು ಪೋಷಿಸುವ ಮಹತ್ವದ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಕಳೆದ ಎರಡು ತಿಂಗಳಿನಿಂದ ಹಸಿರೀಕರಣ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದ್ದು, ರಾಜ್ಯ ಕಾನೂನು ಸೇವಾ ಪ್ರಾಧಿಕಾರದಿಂದ 5 ಕೋಟಿಗೂ ಹೆಚ್ಚು ಗಿಡಗಳನ್ನು ನೆಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ, “ನಾವು ಪ್ರಕೃತಿಗೆ ನೀಡುವ ಕೊಡುಗೆಯೇ ಮುಂದಿನ ಪೀಳಿಗೆಗೆ ಸಿಗುವ ಆಸ್ತಿಯಾಗಿದೆ. ಮರಗಿಡಗಳನ್ನು ಪೋಷಿಸುವುದರಿಂದ ಮಾತ್ರ ಪರಿಸರವನ್ನು ಸಂಪೂರ್ಣವಾಗಿ ಉಳಿಸಬಹುದು” ಎಂದರು.

ಶಾಕ್ಯ ಗ್ಲೋಬಲ್ ಅಕಾಡೆಮಿಯ ಅಧ್ಯಕ್ಷ ಧನುಷ್ ಮಾತನಾಡಿ, ಮಕ್ಕಳಿಗೆ ಬಾಲ್ಯದಿಂದಲೇ ಗಿಡಮರಗಳ ಮಹತ್ವ ಹಾಗೂ ಪರಿಸರ ಪ್ರೇಮದ ಬಗ್ಗೆ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಅರಣ್ಯ ಇಲಾಖೆಯ ಡಿಆರ್‌ಎಫ್‌ಓ ವೀರಭದ್ರ ಕುಂಬಾರ ಕಾರ್ಯಕ್ರಮಕ್ಕೆ ಅಗತ್ಯವಿದ್ದ ವಿವಿಧ ತಳಿಯ ಗಿಡಗಳನ್ನು ಒದಗಿಸಿ, ಇಲಾಖೆಯ ಸಿಬ್ಬಂದಿಯೊಂದಿಗೆ ಸೇರಿ ಹಸಿರು ಆಂದೋಲನವನ್ನು ಅಚ್ಚುಕಟ್ಟಾಗಿ ಆಯೋಜಿಸಿ ಯಶಸ್ವಿಗೊಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಗೀತಾಂಜಲಿ ಜಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಸಮಿತಿ ಕಾರ್ಯದರ್ಶಿ ಶಕುಂತಲಾ ಆರ್., ಅಧಿಕ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶ ಹರ್ಷಿತ, ವಕೀಲರ ಸಂಘದ ಉಪಾಧ್ಯಕ್ಷ ಶಿವಾನಂದ, ಕಾರ್ಯದರ್ಶಿ ಶ್ರೀನಾಥ್ ಆರ್. ಎಸ್., ಖಜಾಂಚಿ ಚೌಡಪ್ಪ, ಸದಸ್ಯರಾದ ಕೆ.ಪಿ. ಮುನಿರಾಜು, ಶ್ರೀನಿವಾಸ ಎಂ., ವಕೀಲರಾದ ರಮೇಶ್, ಕೆ.ಎ. ರಮೇಶ್, ಭಾರತಿ, ವಿಜಯ್, ಡಿಆರ್‌ಎಫ್‌ಓ ವೀರಭದ್ರ ಕುಂಬಾರ, ಎಆರ್‌ಎಫ್‌ಓ ಚಂದನ್ ಸೇರಿದಂತೆ ಅರಣ್ಯ ಇಲಾಖೆಯ ಸಿಬ್ಬಂದಿ, ಶಿಕ್ಷಕರು, ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

